ಸಂಪುಟ 01 । ಸಂಚಿಕೆ 154 ಶನಿವಾರ 09 ಆಗಸ್ಟ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು


# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com


## ಈ ದಿನದ ವಿಶೇಷ

**1. ವಿಶ್ವ ಆದಿವಾಸಿ ಜನರ ಅಂತರರಾಷ್ಟ್ರೀಯ ದಿನ**
ವಿಶ್ವದ ಆದಿವಾಸಿ ಜನರ ಹಕ್ಕುಗಳು, ಸಂಸ್ಕೃತಿ, ಪರಂಪರೆ ಮತ್ತು ಕೊಡುಗೆಗಳ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ.

**2. ಭಾರತ ಬಿಟ್ಟು ತೊಲಗಿ ಚಳವಳಿ ದಿನ**
1942ರ ಆಗಸ್ಟ್ 8–9ರಂದು ಮಹಾತ್ಮ ಗಾಂಧೀಜಿ ನೇತೃತ್ವದಲ್ಲಿ ಬ್ರಿಟಿಷರ ವಿರುದ್ಧ "ಭಾರತ ಬಿಟ್ಟು ತೊಲಗಿ" (Quit India Movement) ಚಳವಳಿ ಆರಂಭವಾಯಿತು. ಆಗಸ್ಟ್ 9ರಂದು ಈ ಚಳವಳಿಯ ಪ್ರಮುಖ ಘಟನೆಗಳನ್ನು ಸ್ಮರಿಸಲಾಗುತ್ತದೆ.

**3. ನಾಗಸಾಕಿ ದಿನ**
1945ರ ಆಗಸ್ಟ್ 9ರಂದು ಜಪಾನ್‌ನ ನಾಗಸಾಕಿ ನಗರದ ಮೇಲೆ ಅಣುಬಾಂಬ್ ದಾಳಿ ನಡೆಯಿತು. ಈ ದಿನವನ್ನು ಶಾಂತಿ ಮತ್ತು ಅಣ್ವಸ್ತ್ರ ನಿಶಸ್ತ್ರೀಕರಣದ ಮಹತ್ವವನ್ನು ನೆನಪಿಸುವ ದಿನವಾಗಿ ಆಚರಿಸಲಾಗುತ್ತದೆ.

**4. ಸಿಂಗಾಪುರ ರಾಷ್ಟ್ರೀಯ ದಿನ**
1965ರ ಆಗಸ್ಟ್ 9ರಂದು ಸಿಂಗಾಪುರ ಸ್ವತಂತ್ರ ರಾಷ್ಟ್ರವಾಯಿತು. ಪ್ರತಿವರ್ಷ ಈ ದಿನವನ್ನು ರಾಷ್ಟ್ರೀಯ ದಿನವಾಗಿ ಆಚರಿಸಲಾಗುತ್ತದೆ.

**5. ರಾಷ್ಟ್ರೀಯ ಪುಸ್ತಕ ಪ್ರೇಮಿಗಳ ದಿನ**
ಪುಸ್ತಕ ಓದುವ ಹವ್ಯಾಸವನ್ನು ಉತ್ತೇಜಿಸಲು ಮತ್ತು ಪುಸ್ತಕಗಳ ಮಹತ್ವವನ್ನು ಸಾರಲು ಈ ಅನೌಪಚಾರಿಕ ದಿನವನ್ನು ಆಚರಿಸಲಾಗುತ್ತದೆ.

## ಸುಭಾಷಿತ

ಮನಸ್ಸಿನ ವಿಕಾಸವು ಮಾನವನ ಅಸ್ತಿತ್ವದ ಅಂತಿಮ ಗುರಿಯಾಗಿರಬೇಕು.

–ಡಾ. ಬಿ.ಆರ್.ಅಂಬೇಡ್ಕರ್


## ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.


## ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸ ನೀಡಿದ ಡಾ. ಅಬು ಜುಬೇರ್

## ಸಿಯಾಟಿಕಾ ಸಮಸ್ಯೆಗೆ ಪಂಚಕರ್ಮ ಪರಿಣಾಮಕಾರಿ ಚಿಕಿತ್ಸಾ ವಿಧಾನ ಆಯುರ್ವೇದ ತಜ್ಞರ ಅಭಿಮತ

❑ ನೈಜ್ಯ ದೇಸೆ ನ್ಯೂಸ್

**ಸಿಂಧನೂರು: ಸನ್‌ರೈಸ್ ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು, ಸಿಂಧನೂರು ವತಿಯಿಂದ ಪ್ರತೀ ಶನಿವಾರದಂತೆ ಸನ್‌ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನಲ್ಲಿ ಶನಿವಾರದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಯಿತು.**

ಆಗಸ್ಟ್ 8ರಂದು ನಡೆದ ಕಾರ್ಯಕ್ರಮದಲ್ಲಿ ಏಕಖಗಿಖ ಆಯುರ್ವೇದಿಕ್ ಕಾಲೇಜಿನ ಖ್ಯಾತ ಆಯುರ್ವೇದ ತಜ್ಞರಾದ ಡಾ. ಅಬು ಜುಬೇರ್ (BAMS, MD) ಅವರು ಮುಖ್ಯ ಅತಿಥಿ ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ, ವಿದ್ಯಾರ್ಥಿಗಳಿಗೆ "ಸಿಯಾಟಿಕಾ (Sciatica) ಸಮಸ್ಯೆಯಲ್ಲಿ ಪಂಚಕರ್ಮದ ಪಾತ್ರ" ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಉಪನ್ಯಾಸದಲ್ಲಿ ಸಿಯಾಟಿಕಾ ಸಮಸ್ಯೆಯ ಕುರಿತು ವಿದ್ಯಾರ್ಥಿಗಳಿಗೆ ಅಗತ್ಯವಾದ ಮಾಹಿತಿಯನ್ನು ನೀಡಿದ ಡಾ. ಅಬು ಜುಬೇರ್ ಅವರು, ಸಿಯಾಟಿಕಾ ಸಮಸ್ಯೆಯ ಸ್ವರೂಪ, ಕಾರಣಗಳು, ಲಕ್ಷಣಗಳು ಹಾಗೂ ರೋಗಿಗಳ ಆರೈಕೆಯಲ್ಲಿ ಆರೋಗ್ಯ ವೃತ್ತಿಪರರ ಪಾತ್ರದ ಕುರಿತು ವಿವರಿಸಿದರು. ಆಯುರ್ವೇದ ಚಿಕಿತ್ಸಾ ಪದ್ಧತಿಯಲ್ಲಿ ಪಂಚಕರ್ಮಕ್ಕೆ ಇರುವ ಮಹತ್ವ ಹಾಗೂ ಸೂಕ್ತ ಚಿಕಿತ್ಸೆಯನ್ನು ತಜ್ಞರ ಸಲಹೆಯೊಂದಿಗೆ ಪಡೆಯುವ ಅಗತ್ಯದ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ನರ್ಸಿಂಗ್ ವೃತ್ತಿಯ




ಮಹತ್ವ, ರೋಗಿಗಳ ಆರೈಕೆಯಲ್ಲಿ ನರ್ಸ್‌ಗಳ ಜವಾಬ್ದಾರಿ, ಸೇವಾ ಮನೋಭಾವ, ಮಾನವೀಯ ಮೌಲ್ಯಗಳು ಹಾಗೂ ಆರೋಗ್ಯ ಕ್ಷೇತ್ರದಲ್ಲಿ ನರ್ಸಿಂಗ್ ವೃತ್ತಿಗೆ ಇರುವ ಅಪಾರ ಅವಕಾಶಗಳ ಕುರಿತು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹಾಗೂ ಸೇವಾ ಮನೋಭಾವವನ್ನು ಹೆಚ್ಚಿಸುವಂತಹ ಸ್ಫೂರ್ತಿದಾಯಕ ಮಾತುಗಳನ್ನು ಆಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಸನ್‌ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು, ಪ್ರತೀ ಶನಿವಾರ ಆಯೋಜಿಸಲಾಗುತ್ತಿರುವ ವಿಶೇಷ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ತರಗತಿ ಶಿಕ್ಷಣದ ಜೊತೆಗೆ ಪ್ರಾಯೋಗಿಕ ಹಾಗೂ ವೃತ್ತಿಪರ ಜ್ಞಾನವನ್ನು ಪಡೆಯಲು ಸಹಕಾರಿಯಾಗಿದೆ ಎಂದು ಹೇಳಿದರು. ವಿವಿಧ ಕ್ಷೇತ್ರಗಳ ತಜ್ಞರನ್ನು ಸಂಸ್ಥೆಗೆ ಆಹ್ವಾನಿಸಿ ವಿದ್ಯಾರ್ಥಿಗಳಿಗೆ ಉಪಯುಕ್ತವಾದ ವಿಷಯಗಳ ಕುರಿತು ಉಪನ್ಯಾಸಗಳನ್ನು ನೀಡಿಸುವ ಮೂಲಕ





ಅವರ ಜ್ಞಾನವನ್ನು ವಿಸ್ತರಿಸುವ ಪ್ರಯತ್ನವನ್ನು ಸಂಸ್ಥೆ ನಿರಂತರವಾಗಿ ಮಾಡುತ್ತಿದೆ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುವುದರ ಜೊತೆಗೆ, ಭವಿಷ್ಯದಲ್ಲಿ ಉತ್ತಮ ಆರೋಗ್ಯ ಸೇವಕರಾಗಿ ರೂಪುಗೊಳ್ಳಲು ಸಹಕಾ–ರಿಯಾಗುತ್ತವೆ ಎಂದು ಅವರು ತಿಳಿಸಿದರು.

ಸಿಯಾಟಿಕಾ ಸಮಸ್ಯೆಯಲ್ಲಿ ಪಂಚಕರ್ಮದ ಪಾತ್ರದ ಕುರಿತು ವಿದ್ಯಾರ್ಥಿಗಳಿಗೆ ಉಪಯುಕ್ತ ಹಾಗೂ ಜ್ಞಾನವರ್ಧಕ ಮಾಹಿತಿಯನ್ನು ನೀಡಿದ ಡಾ. ಅಬು ಜುಬೇರ್ (BAMS, MD) ಅವರಿಗೆ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ., ಕಾರ್ಯದರ್ಶಿಯಾದ ಇರ್ಷಾದ್ ಕೆ., ಎಲ್ಲಾ ವಿಭಾಗಗಳ ಪ್ರಾಚಾರ್ಯರು ಹಾಗೂ ಉಪನ್ಯಾಸಕರ ಪರವಾಗಿ ಲಾಜರ್ ಸಿರಿಲ್ ಅವರು ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ನರ್ಸಿಂಗ್ ವಿಭಾಗದ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ವಿಶೇಷ ಉಪನ್ಯಾಸದ ಪ್ರಯೋಜನ ಪಡೆದುಕೊಂಡರು.

ವಿದ್ಯಾರ್ಥಿಗಳ ಶೈಕ್ಷಣಿಕ ಜ್ಞಾನಕ್ಕೆ ವೃತ್ತಿಪರ ಅನುಭವವನ್ನು ಜೋಡಿಸುವ ನಿಟ್ಟಿನಲ್ಲಿ ಸನ್‌ರೈಸ್ ವಿದ್ಯಾಸಂಸ್ಥೆಯ ವತಿಯಿಂದ ಪ್ರತೀ ಶನಿವಾರ ನಡೆಯುತ್ತಿರುವ ವಿಶೇಷ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳ ಮೆಚ್ಚುಗೆಗೆ ಪಾತ್ರವಾಗಿದೆ.





## ಕಾರುಣ್ಯಾಶ್ರಮದಲ್ಲಿ ಸಿಂಧನೂರು ತಹಸೀಲ್ದಾರರಾದ ಅರುಣ್ ದೇಸಾಯಿ ಅವರ ಜನ್ಮದಿನ ಸಮಾರಂಭ

❑ ನೈಜ್ಯ ದೇಸೆ ನ್ಯೂಸ್

**ಸಿಂಧನೂರು:ಸಿಂಧನೂರು ತಹಸೀಲ್ದಾರರು ಹಾಗೂ ಕಾರ್ಯನಿರ್ವಾಹಕ ದಂಡಾಧಿಕಾರಿಗಳಾದ ಅರುಣ್. ಹೆಚ್. ದೇಸಾಯಿ ಅವರು ತಮ್ಮ ಜನ್ಮದಿನ ಸಮಾರಂಭ ಕಾರ್ಯಕ್ರಮವನ್ನು ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀ ಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಾಗೂ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿಸಿದರು.**

ಈ ಕಾರ್ಯಕ್ರಮದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ನಮ್ಮ ಸಿಂಧನೂರಿನ ತಹಸೀಲ್ದಾರರಾದ ಅರುಣ್ ದೇಸಾಯಿ ಅವರ ಕರ್ತವ್ಯ ಎಲ್ಲರ ಪ್ರೀತಿಗೆ ಪಾತ್ರವಾಗಿದೆ. ಮತ್ತು ನಮ್ಮ ಸಂಸ್ಥೆಯ ಸಮಾಜ ಸೇವಾ ಕಾರ್ಯಗಳಿಗೆ




ಮಾರ್ಗದರ್ಶನ ನೀಡುತ್ತಾ ಸರ್ಕಾರದ ಸೌಲಭ್ಯಗಳನ್ನು ಒದಗಿಸುವಲ್ಲಿ ಪ್ರಯತ್ನಪಡುತ್ತಿದ್ದಾರೆ. ಸಂವಿಧಾನದ ಮೂಲಕ ಕಾನೂನಿನ ಪ್ರತಿಯೊಂದು ಅಂಶವನ್ನು ಕೂಡ ತಿಳಿಸುವ ಮೂಲಕ ಈ ಸಂಸ್ಥೆಯನ್ನು ರಾಜ್ಯ ಮಟ್ಟದಲ್ಲಿ ತೋರಿಸುವಲ್ಲಿ ಅವರು ಕೂಡ ಕಾರಣ–ರು ಬರೀ ಅಧಿಕಾರಿಯಾಗಿ ಅಲ್ಲದೆ ಮಾನ್ವಿಯತೆಯ ದೃಷ್ಟಿಯಿಂದ ಕಾರುಣ್ಯ ಕುಟುಂಬದಲ್ಲಿರುವ ಎಲ್ಲಾ ಹಿರಿಯರು ಕೂಡ ನನ್ನ ತಂದೆ ತಾಯಿಗಳ ಸಮಾನರು ವಯಸ್ಕರ ಬುದ್ಧಿಮಾಂದ್ಯರು ನನ್ನ ಅಣ್ಣ ತಮ್ಮಂದಿರು ಅಕ್ಕತಂಗಿಯರ ಸಮಾನರು ಎನ್ನುವ ಮನೋಭಾವನೆಯನ್ನು ಹೊಂದಿರುವ ನಮ್ಮ ಅರುಣ್ ದೇಸಾಯಿ ಅವರಿಗೆ ಅವರ ಜನ್ಮದಿನದ ಈ ಶುಭದಿನದಂದು ನಮ್ಮ ಕಾರುಣ್ಯ ಸಂಸ್ಥೆಯಿಂದ " ಕರುಣೆಯ ಕರುಣಾಮಯಿ ಕಾರುಣ್ಯ ಮೂರ್ತಿಗಳು " ಎನ್ನುವ ಶ್ರೇಷ್ಠ ಗೌರವಾನ್ವಿತ ಬಿರುದಿನ ಅಭಿಧಾನದೊಂದಿಗೆ ಶುಭಕೋರಿ ಆಶೀರ್ವದಿಸಲಾಗಿದೆ.

ಅವರು ಪದೋನ್ನತಿ ಹೊಂದಿ ಸರ್ಕಾರದ ಇನ್ನೂ ಅನೇಕ ಹಲವಾರು ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ಯಶಸ್ವಿಯಾಗಲಿ ಮುತ್ತು ಅವರ ಕುಟುಂಬಕ್ಕೆ ಭಗವಂತ ಸಕಲೈಶ್ವರ್ಯ ಸಿರಿ ಸಂಪತ್ತು ಆಯಸ್ಸು ಆಯುರಾರೋಗ್ಯ ಸುಖ ಶಾಂತಿ ನೆಮ್ಮದಿ ದೊರೆಯಲಿ ಎಂದು ಅವರ ಜನ್ಮ ದಿನದ ಈ ಶುಭಗಳಿಗೆಯಲ್ಲಿ ಹಾರೈಸುತ್ತಿದ್ದೇವೆ ಎಂದು ಮಾತನಾಡಿ ಜನ್ಮದಿನದ ಶುಭಾಶಯಗಳನ್ನು ಕೋರಿದರು.

ಈ ಸಮಯದಲ್ಲಿ ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ.ಮರಿಯಪ್ಪ. ಜ್ಯೋತಿ. ಮಹಾಂತೇಶ ದೋಟಿಹಾಳ ಹಾಗೂ ಬಸವ ಸ್ವಾಮಿ ಮತ್ತು ಎಲ್ಲಾ ಆಶ್ರಯದಾತರುಗಳು ತಹಸಿಲ್ದಾರರಾದ ಅರುಣ್. ಹೆಚ್. ದೇಸಾಯಿ ಅವರಿಗೆ ಶುಭ ಕೋರಿದರು.

## ಸಚಿವ ಅಜಯ್ ಸಿಂಗ್ ರವರಿಗೆ ಸಂಕಲ್ಪ ಒಕ್ಕೂಟದಿಂದ ವಿಕಲಚೇತನರ ಬೇಡಿಕೆಗಳ ಮನವಿ

❑ ನೈಜ್ಯ ದೇಸೆ ನ್ಯೂಸ್

**ಮಾನ್ವಿ: ರಾಯಚೂರು ಜಿಲ್ಲೆಯ ವಿಕಲಚೇತನರ ವಿವಿಧ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಸಂಕಲ್ಪ ವಿಕಲಚೇತನರ ಒಕ್ಕೂಟ, ರಾಯಚೂರು ವತಿಯಿಂದ ಇಂದು ಮಾನ್ವಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ (ಐ.ಬಿ.) ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಅಜಯ್ ಸಿಂಗ್ ಅವ–ರಿಗೆ ಮನವಿ ಪತ್ರ ಸಲ್ಲಿಸಲಾಯಿತು.**

ಮನವಿಯಲ್ಲಿ ಜಿಲ್ಲೆಯ ವಿಕಲಚೇತನರಿಗೆ ಸ್ಥಗಿತಗೊಂಡಿರುವ ಸಾಮಾಜಿಕ ಭದ್ರತಾ ಮಾಸಾಶನ ಬಿಡುಗಡೆ, ಮಾಸಿಕ ಪಿಂಚಣಿ ಹೆಚ್ಚಳ, ಉಚಿತ ಬಸ್ ಪಾಸ್, ವಿಕಲಚೇತನರಿಗೆ ಮೀಸಲಾದ 5% ಅನುದಾನದ ಸಮರ್ಪಕ ಬಳಕೆ, ಗಆಖಆ ಕಾರ್ಡ್ ಹಾಗೂ ವಿಕಲಚೇತನ ಪ್ರಮಾಣಪತ್ರಗಳ ವಿತರಣೆಯ ವಿಳಂಬ ನಿವಾರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಡಲಾಯಿತು.



ಅದೇ ರೀತಿ ಜಿಲ್ಲೆಯ ಪುನರ್ವಸತಿ ಕಾರ್ಯಕರ್ತರಿಗೆ ಅಗತ್ಯ ಕಚೇರಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು, ರಾಯಚೂರು ಜಿಲ್ಲೆಯ ವಿಕಲಚೇತನರ ಸಮಸ್ಯೆಗಳ ಪರಿಹಾರಕ್ಕಾಗಿ ಅಧಿಕಾರಿಗಳೊಂದಿಗೆ ನಿಯಮಿತವಾಗಿ ಸಭೆ ನಡೆಸುವಂತೆ ಮನವಿಯಲ್ಲಿ ಕೋರಲಾಯಿತು.

ಈ ಸಂದರ್ಭದಲ್ಲಿ ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷ ಶಿವಕುಮಾರ್ ಚಲ್ಮಲ್ ಸೇ–ರಿದಂತೆ ಒಕ್ಕೂಟದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಜಿಲ್ಲೆಯ ವಿಕಲಚೇತನರ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು, ಶೀಘ್ರ ಪರಿಹಾರ ಕಲ್ಪಿಸುವಂತೆ ಸಚಿವರಿಗೆ ಮನವಿ ಮಾಡಲಾಗಿದೆ ಎಂದು ಒಕ್ಕೂಟ ತಿಳಿಸಿದೆ.

## ಭೂಮಾನಂದ ಹತ್ಯೆ ಖಂಡಿಸಿ ಪ್ರತಿಭಟನೆ

❑ ನೈಜ್ಯ ದೇಸೆ ನ್ಯೂಸ್

**ಕವಿತಾಳ: ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಸುಂಕೇಶ್ವರಹಾಳ ಗ್ರಾಮದಲ್ಲಿ ಮಾದಿಗ ಸಮೂದಾಯದ ಯುವಕ ಹಾಗೂ ಬಹುಜನ ಪಕ್ಷದ ಕಾರ್ಯಕರ್ತ ಭೂಮಾನಂದ ಹದ್ನಾಳ ಅವರ ಹತ್ಯೆಯನ್ನು ಖಂಡಿಸಿ ದಲಿತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆಯನ್ನು ಮಾಡಲಾಯಿತು.**

ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲಾ ಆರೋಪಿಗಳನ್ನು ಶೀಘ್ರವೇ ಬಂಧಿಸಿ ಪ್ರಕರಣ ತನಿಖೆಯನ್ನು ತ್ವರಿತಗೊಳಿಸಬೇಕು, ತಪ್ಪಿತಸ್ಥರಿಗೆ ಕಾನೂನಿನಡಿ ಕಠಿಣ ಶಿಕ್ಷೆಗೊಳಪಡಿಸಬೇಕು ಎಂದು ಒಕ್ಕೂಟದ ಸದಸ್ಯರು ಒತ್ತಾಯಿಸಿ ಮುಖ್ಯಮಂತ್ರಿಗಳಿಗೆ ಬರೆದ ಮನವಿಯನ್ನು ನಾಡ ತಹಸೀಲ್ದಾರರ ಮೂಲಕ ಸಲ್ಲಿಸಿದರು. ಮೃತ ಕುಟುಂಬಕ್ಕೆ ಒಂದು ಕೋಟಿ ಪರಿಹಾರ ನೀಡಬೇಕು, ಜೊತೆಗೆ ಕುಟುಂಬಕ್ಕೆ ಕೃಷಿ ಜಮೀನು ಮಂಜೂರಿ ಮಾಡಬೇಕು, ಕುಟುಂದಬ ಒಬ್ಬ ಸದಸ್ಯರಿಗೆ ಸರ್ಕಾರಿ




ಉದ್ಯೋಗ ನೀಡಬೇಕು ಹಾಗೂ ಕುಟುಂಬದ ಸದಸ್ಯರಿಗೆ ಶಾಸ್ವತ ಪೊಲೀಸ್ ರಕ್ಷಣೆ ಕಲ್ಪಿಸಬೇಕು ಎಂದು ಮನವಿಯಲ್ಲ ಆಗ್ರಹಿಸಲಾಗಿದೆ.

ದಲಿತ ಹಾಗೂ ಮಾದಿಗ ಸಮುದಾಯದವರ ಮೇಲೆ ಜಾತಿ ದ್ವೇಷದ ಹಿನನೆಲೆಯಲ್ಲಿ ನಡೆಯುವ ದೌರ್ಜನ್ಯಗಳನ್ನು ತಡೆಗಟ್ಟಲು ಸರ್ಕಾರ ಶೂನ್ಯ ಸಹಿಷ್ಣುತೆ ನೀತಿಯನ್ನು ಅನುಸ–ರಿಸಬೇಕು, ಇಂತಹ ಪ್ರಕರಣಗಳ ತ್ವರಿತ ತನಿಖೆ ಮತ್ತು ನಿಯಂತ್ರಣಕ್ಕಾಗಿ ವಿಶೇಶ ಕಾರ್ಯಪಡೆಯನ್ನು ರಚಿಸಬೇಕು ಎಂದು ಸಂಘಟನೆಯ ಮುಖಂಡರು ಒತ್ತಾಯಿಸಿದರು.

ಈ ಸಂಧರ್ಭದಲ್ಲಿ ಹಿರಿಯ ದಲಿತ ಮುಖಂಡ ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಕಿರಿಲಿಂಗಪ್ಪ, ಈರಣ್ಣ ಕೆಳಗೇರಿ, ಅರಳಪ್ಪ ತುಪ್ಪದೂರು, ಮೈಬುಸಾಬ್ ದಸಂಸ ಅಧಕ್ಷ ಹುಚ್ಚಪ್ಪ ಬುಳ್ಳಾಪೂರ, ಹುಲುಗಪ್ಪ ಮ್ಯಾಗಳಮನಿ, ಹನುಮಂತ ಬುಳ್ಳಾಪುರ, ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

# ವೀರಶೈವ ಕಲ್ಯಾಣ ಮಂಟಪ ಕಾಮಗಾರಿ ಪರಿಶೀಲಿಸಿದ ಶಾಸಕ ಹಂಪನಗೌಡ ಬಾದರ್ಲಿ

# ಹಾನಗಲ್ ಕುಮಾರೇಶ್ವರ ಮಹಾಸ್ವಾಮಿಗಳ 159ನೇ ಜಯಂತಿಗೆ ಭರದ ಸಿದ್ಧತೆ; ಪೂರ್ವಭಾವಿ ಸಭೆ

❑ ನೈಜ್ಯ ದೇಸೆ ನ್ಯೂಸ್

**ಸಿಂಧನೂರು: ನಗರದ ವೀರಶೈವ ಕಲ್ಯಾಣ ಮಂಟಪದ ಅಭಿವೃದ್ಧಿ ಕಾಮಗಾರಿ ಸ್ಥಳಕ್ಕೆ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಅವರು ಭೇಟಿ ನೀಡಿ, ನಡೆಯುತ್ತಿರುವ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು.**

ಕಲ್ಯಾಣ ಮಂಟಪದಲ್ಲಿ ಕೈಗೆತ್ತಿಕೊಳ್ಳಲಾಗಿರುವ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಖುದ್ದಾಗಿ ವೀಕ್ಷಿಸಿದ ಶಾಸಕರು, ಕಾಮಗಾರಿಯ ಗುಣಮಟ್ಟ, ಪ್ರಸ್ತುತ ಪ್ರಗತಿ ಹಾಗೂ ಮುಂದಿನ ಹಂತದಲ್ಲಿ ಕೈಗೊಳ್ಳಬೇಕಾದ ಕಾರ್ಯಗಳ ಕುರಿತು ಸಂಬಂಧಪಟ್ಟವರಿಂದ ಮಾಹಿತಿ



ಪಡೆದರು. ಕಾಮಗಾರಿಗಳನ್ನು ಯಾವುದೇ ಕಾರಣ–ಕ್ಕೂ ವಿಳಂಬ ಮಾಡದೆ, ನಿಗದಿತ ಅವಧಿಯಲ್ಲಿ ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಸೂಚಿಸಿದರು.

ಜಯಂತಿ ಆಚರಣೆಗೆ ಪೂರ್ವಭಾವಿ ಸಭೆ

ಇದೇ ಸಂದರ್ಭದಲ್ಲಿ ಮುಂದಿನ ತಿಂಗಳು ನಡೆಯಲಿರುವ ಶ್ರೀ ಅನಗಲ್ ಕುಮಾರೇಶ್ವರ ಮಹಾಸ್ವಾಮಿಗಳ 159ನೇ ಜಯಂತಿ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು.

ಸಭೆಯಲ್ಲಿ ಜಯಂತಿ ಕಾರ್ಯಕ್ರಮದ ರೂಪುರೇಷೆ, ಧಾರ್ಮಿಕ ಹಾಗೂ ಸಾಂಸ್ಕೃತಿ–ಕ ಕಾರ್ಯಕ್ರಮಗಳು, ಭಕ್ತರ ಪಾಲ್ಗೊಳ್ಳುವಿಕೆ, ವೇದಿಕೆ ವ್ಯವಸ್ಥೆ, ಕುಡಿಯುವ ನೀರು, ವಾಹನ ನಿಲುಗಡೆ, ಸ್ವಚ್ಛತೆ, ಪ್ರಸಾದ ವಿತರಣೆ ಸೇರಿದಂತೆ ವಿವಿಧ ವ್ಯವಸ್ಥೆಗಳ ಕು–ರಿತು ಸಮಾಜದ ಗುರುಗಳು, ಹಿರಿಯರು ಹಾಗೂ ಮುಖಂಡರೊಂದಿಗೆ ಸಮಾಲೋಚನೆ ನಡೆಸಲಾಯಿತು.

ಜಯಂತಿ ಕಾರ್ಯಕ್ರಮವು ಕೇವಲ ಆಚ–'ರಣೆಗೆ ಸೀಮಿತವಾಗದೆ, ಶ್ರೀ ಅನಗಲ್ ಕುಮಾರೇಶ್ವರ ಮಹಾಸ್ವಾಮಿಗಳ ಆದರ್ಶ, ತತ್ವ ಹಾಗೂ ಸಮಾಜಮುಖಿ ಸಂದೇಶಗಳನ್ನು ಜನರಿಗೆ ತಲುಪಿಸುವ ರೀತಿಯಲ್ಲಿ ಅರ್ಥಪೂರ್ಣವಾಗಿ ಆಯೋಜಿಸಬೇಕು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಕಾರ್ಯಕ್ರಮಕ್ಕೆ ಹೆಚ್ಚಿನ 3ನೇ ಪುಟಕ್ಕೆ

## ಸಾಹಿತ್ಯ ಸಿಂಚನ

### ಜೀವನದ ಜ್ಯೋತಿ

ಜೀವನದ ದಾರಿಯಲ್ಲಿ ಜ್ಯೋತಿಯೊಂದು ಬೆಳಗಲಿ,
ಕತ್ತಲೆಯ ಮೋಡಗಳೆಲ್ಲ ದೂರವಾಗಿ ಸರಿಯಲಿ.
ಕನಸುಗಳ ಕಣ್ಣಿನಲ್ಲಿ ಹೊಸ ಭರವಸೆ ಮೂಡಲಿ,
ನಂಬಿಕೆಯ ಹೆಜ್ಜೆಗಳಲ್ಲಿ ಯಶಸ್ಸು ಜೊತೆ ನಡೆಯಲಿ.

ನೋವು ಬಂದಾಗ ಮನಸ್ಸು ಕುಗ್ಗದಿರಲಿ,
ಸೋಲು ಬಂದಾಗ ಪ್ರಯತ್ನ ನಿಲ್ಲದಿರಲಿ.
ಬಿರುಗಾಳಿಯ ನಡುವೆಯೂ ದೀಪದಂತೆ ನಿಲ್ಲು,
ಕಷ್ಟಗಳ ನಡುವೆಯೂ ನಗುವಿನ ಹೂವು ಅರಳಿಸು.

ನಿನ್ನೊಳಗಿನ ಶಕ್ತಿಯನ್ನು ನೀ ಅರಿತುಕೋ,
ನಿನ್ನ ಕನಸುಗಳಿಗಾಗಿ ಧೈರ್ಯದಿಂದ ಹೋರಾಡು.
ಕತ್ತಲೆಯ ದಾರಿಯೂ ಬೆಳಕಿನತ್ತ ಕರೆದೊಯ್ಯುತ್ತದೆ,
ತಾಳ್ಮೆಯ ಹೆಜ್ಜೆಯೂ ಗೆಲುವಿನ ಬಾಗಿಲು ತೆರೆಯುತ್ತದೆ.

ಪ್ರತಿ ಬೆಳಗು ಹೊಸ ಆಶೆಯ ಸಂದೇಶವಾಗಲಿ,
ಪ್ರತಿ ಕ್ಷಣವೂ ಬದುಕಿನ ಪಾಠವಾಗಲಿ.
ಕಣ್ಣೀರಿನ ಹನಿಯೂ ಮುತ್ತಾಗಿ ಬದಲಾಗಲಿ,
ನಿನ್ನ ಪರಿಶ್ರಮದ ಫಲವು ನಗುವಾಗಿ ಅರಳಲಿ.

ಜೀವನವೆಂಬ ಪಯಣದಲ್ಲಿ ಭರವಸೆಯ ದೀಪ ಹಚ್ಚು,
ನಿನ್ನೊಳಗಿನ ಕನಸುಗಳಿಗೆ ರೆಕ್ಕೆಗಳನ್ನು ಕೊಡು.
ಜಗತ್ತು ಕತ್ತಲಾದರೂ ನೀ ಬೆಳಕಾಗಿರು,
ಇತರರ ಬದುಕಿಗೂ ದಾರಿದೀಪವಾಗಿರು.

ನಿನ್ನ ನಗು ಮತ್ತೊಬ್ಬರ ನೋವು ಮರೆಯಿಸಲಿ,
ನಿನ್ನ ಮಾತು ಮತ್ತೊಬ್ಬರ ಮನಕೆ ಧೈರ್ಯ ನೀಡಲಿ.
ನಿನ್ನ ಹೆಜ್ಜೆಗಳು ಹೊಸ ದಾರಿಗಳನ್ನು ಸೃಷ್ಟಿಸಲಿ,
ನಿನ್ನ ಬದುಕು ಅನೇಕರಿಗೆ ಸ್ಫೂರ್ತಿಯಾಗಲಿ.

ಜೀವನದ ಜ್ಯೋತಿ ಎಂದಿಗೂ ಆರದಿರಲಿ,
ಭರವಸೆಯ ಬೆಳಕು ಹೃದಯದಿಂದ ದೂರವಾಗದಿರಲಿ.
ಕನಸುಗಳ ದಾರಿಯಲ್ಲಿ ನಿರಂತರವಾಗಿ ಸಾಗು,
ನಿನ್ನ ಬದುಕಿನ ಆಕಾಶದಲ್ಲಿ ವಿಜಯದ ಸೂರ್ಯ
ಉದಯಿಸಲಿ.

## ಮಸ್ಕಿಯಲ್ಲಿ ಶ್ರೀರಾಮುಲು ಹುಟ್ಟುಹಬ್ಬ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮಾಜಿ ಸಚಿವ ಹಾಗೂ ಬಿಜೆಪಿ ಮುಖಂಡ ಬಿ. ಶ್ರೀರಾಮುಲು ಅವರ ಹುಟ್ಟುಹಬ್ಬವನ್ನು ರಾಮುಲು ಅಭಿಮಾನಿಗಳು ಹಾಗೂ ಬಿಜೆಪಿ ಮುಖಂಡರು,ಬೆಂಬಲಿಗರು ಶುಕ್ರವಾರ ಪಟ್ಟಣದಲ್ಲಿ ಸಂಭ್ರಮದಿಂದ ಆಚರಿಸಿದರು.**




ಈ ಸಂದರ್ಭದಲ್ಲಿ ಅಭಿಮಾನಿಗಳು ಕೇಕ್ ಕತ್ತರಿಸಿ, ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಮಾತನಾಡಿ ಶ್ರೀರಾಮುಲು ಅವರ ಸಾಮಾಜಿಕ ಹಾಗೂ ರಾಜಕೀಯ ಸೇವೆಯನ್ನು ಸ್ಮ-ರಿಸಿದರು ಶ್ರೀರಾಮುಲು ಅವರು ಮತ್ತಷ್ಟು ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲಿ ಎಂದು ಹಾರೈಸಿದರು. ಕಾರ್ಯಕ್ರಮದಲ್ಲಿ ಶ್ರೀರಾಮುಲು ಅಭಿಮಾನಿಗಳ ಬಳದ ಆರ್ ಕೆ ನಾಯಕ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಹಾಗೂ ಬೆಂಬಲಿಗರು ಭಾಗವಹಿಸಿದ್ದರು.

# ಎಕರೆಗೆ –50 ಸಾವಿರ ಬೆಳೆ ಪರಿಹಾರ ನೀಡಲು ಆಗ್ರಹ

## ಉಸ್ತುವಾರಿ ಸಚಿವ ಅಜಯ್ ಧರ್ಮಸಿಂಗ್ ಅವರಿಗೆ ರೈತ ಸಂಘದಿಂದ ಮನವಿ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಜವಳಗೇರಾ ಹೋಬಳಿ ವ್ಯಾಪ್ತಿಯ ಜವಳಗೇರಾ ಸೀಮಾದಲ್ಲಿ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಬೆಳೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಚಿವರಿಗೆ ಮನವಿ ಪತ್ರ ಸಲ್ಲಿಸಲಾಯಿತು.**

ಮಳೆ ಕೊರತೆ ಹಾಗೂ ಬೆಳೆ ಹಾನಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆ ಹಾನಿಗೊಳಗಾದ ರೈತರಿಗೆ ಎಕರೆಗೆ ?50,000 ಪರಿಹಾರ ನೀಡಬೇಕು ಎಂದು ಸಂಘಟನೆ ಒತ್ತಾಯಿಸಿತು. ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು ಹಾಗೂ ಸಾಲ ವಸೂಲಾತಿ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು



ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ರೈತರಿಗೆ ಸಾಲ ಸೌಲಭ್ಯ ನೀಡುವ ಸಂದರ್ಭದಲ್ಲಿ ಸಿಬಿಲ್ (CIBIL) ಪರಿಗಣಿಸಬಾರದು.

ರೈತರ ವಿರುದ್ಧ ಸಾಲಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಹೂಡುವ ಕ್ರಮವನ್ನು ಕೈಬಿಡಬೇಕು ಎಂದು ಒತ್ತಾಯಿಸಲಾಯಿತು. ಸರ್ಕಾರಿ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಬೇಕು. ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಡಾ. ಎಂ.ಎಸ್. ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೊಳಿಸುವಂತೆ ಕೇಂದ್ರ ಸರ್ಕಾರದ ಮೇಲೆ ರಾಜ್ಯ ಸರ್ಕಾರ ಒತ್ತಡ ಹೇರಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಇದೇ ವೇಳೆ ಗೋಮಾಳ, ಕೆರೆ, ಅಮೃತ ಮಹಲ್, ಪರಂಪೋಕ್ ಹಾಗೂ ಸರ್ಕಾರಿ ಅರಣ್ಯ ಜಮೀನುಗಳನ್ನು ಜಾನುವಾರುಗಳ ಮೇವು ಹಾಗೂ ಸಂರಕ್ಷಣೆಗಾಗಿ ಮೀಸಲಿಡಬೇಕು. ಇಂತಹ ಜಮೀನುಗಳನ್ನು ಕೃಷಿ ಸೇರಿದಂತೆ ಇತರೆ ಚಟುವಟಿಕೆಗಳಿಗೆ ವರ್ಗಾಯಿಸಬಾರದು ಎಂದು ರೈತ ಸಂಘ ಒತ್ತಾಯಿಸಿದೆ.

ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆ ಮಾಡಬೇಕು. ಗ್ರಾಮೀಣ ಪ್ರದೇಶಗಳಲ್ಲಿ ರೈತರು ಹಾಗೂ ಕುಟುಂಬಗಳ ಮೇಲೆ ದುಷ್ಪರಿಣಾಮ ಬೀರುವ ಅನಧಿಕೃತ ಹಾಗೂ ಅಧಿಕೃತ ಮದ್ಯ ಮಾರಾಟ ಮತ್ತು ಸೇವನೆಯನ್ನು ಸಂಪೂರ್ಣ ನಿಷೇಧಿಸಬೇಕು ಎಂದು ಮನವಿ ಮಾಡಲಾಗಿದೆ. ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಬೆಳೆ ಹಾನಿಯ ಸಮಗ್ರ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ಒದಗಿಸಬೇಕು ಎಂದು ಸಂಘಟನೆ ಮುಖಂಡರು ಸಚಿವರಿಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು, ಸ್ಥಳೀಯ ರೈತರು ಸೇ-ರಿದಂತೆ ಹಲವರು ಉಪಸ್ಥಿತರಿದ್ದರು.

# ರೈತರಿಗೆ ತೊಂದರೆಯಾಗದಂತೆ ಹೆದ್ದಾರಿ ಕಾಮಗಾರಿ ಪೂರ್ಣಗೊಳಿಸಿ

## ವಿಳಂಬಕ್ಕೆ ಅವಕಾಶವಿಲ್ಲ; ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಿ: ಅಧಿಕಾರಿಗಳಿಗೆ ಸೂಚನೆ

**ರಾಯಚೂರು: ರಾಯಚೂರು ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಓಊಂಋ) ವತಿಯಿಂದ ಕೈಗೆತ್ತಿಕೊಳ್ಳಲಾಗಿರುವ ವಿವಿಧ ಹೆದ್ದಾರಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿ, ಕಾಮಗಾರಿಗಳನ್ನು ತ್ವ-ರಿತವಾಗಿ ಪೂರ್ಣಗೊಳಿಸುವಂತೆ ಅಧಿಕಾ-ರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.**

ಕ್ಷೇತ್ರದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಹೆದ್ದಾರಿ ಕಾಮಗಾ-ರಿಗಳ ಪ್ರಗತಿ, ಭೂಸ್ವಾಧೀನ, ಕಾಮಗಾರಿ ಪೂರ್ಣಗೊಳಿಸುವ ಅವಧಿ ಹಾಗೂ ಕಾಮಗಾ-ರಿಗಳ ವೇಳೆ ಎದುರಾಗುತ್ತಿರುವ ಸ್ಥಳೀಯ ಸಮಸ್ಯೆಗಳ ಕುರಿತು ಸಭೆಯಲ್ಲಿ ಅಧಿಕಾ-ರಿಗಳಿಂದ ಸಮಗ್ರ ಮಾಹಿತಿ ಪಡೆಯಲಾಯಿತು. ಹೆದ್ದಾರಿ ಅಭಿವೃದ್ಧಿ ಅಗತ್ಯವೇ ಆಗಿದ್ದರೂ, ಅದರ ಹೆಸರಿನಲ್ಲಿ ಸ್ಥಳೀಯ ರೈತರು ಸಂಕಷ್ಟಕ್ಕೆ ಸಿಲುಕುವಂತಾಗಬಾರದು. ರೈತರ ಜಮೀನು, ಕೃಷಿ ಚಟುವಟಿಕೆ, ನೀರಾವರಿ ವ್ಯವಸ್ಥೆ ಹಾಗೂ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಮೇಲೆ ಕಾಮಗಾರಿಯಿಂದ ಅನಗತ್ಯ ಪರಿಣಾಮ ಉಂಟಾಗದಂತೆ ಅಧಿಕಾರಿಗಳು ಎಚ್ಚ-ರಿಕೆ ವಹಿಸಬೇಕು ಎಂದು ಸೂಚಿಸಲಾಯಿತು.

ಹೆದ್ದಾರಿ ಕಾಮಗಾರಿಗಳಿಂದ ರೈತರ ಕೃಷಿ ಚಟುವಟಿಕೆಗಳಿಗೆ ಅಡಚಣೆ ಉಂಟಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯನ್ನು ತ್ವರಿತವಾಗಿ ಪರಿಹರಿಸಬೇಕು.



ರೈತರ ಅಹವಾಲುಗಳನ್ನು ನಿರ್ಲಕ್ಷಿಸದೆ, ಅವರೊಂದಿಗೆ ಸಮನ್ವಯ ಸಾಧಿಸಿ ಕಾಮಗಾರಿ ಮುಂದುವರಿಸಬೇಕು ಎಂದು ತಿಳಿಸಲಾಯಿತು.

ಅನಗತ್ಯ ವಿಳಂಬಕ್ಕೆ ಅವಕಾಶವಿಲ್ಲ ಜನರಿಗೆ ಬಹುದಿನಗಳಿಂದ ನಿರೀಕ್ಷೆಯಾಗಿರುವ ಹೆದ್ದಾರಿ ಕಾಮಗಾರಿಗಳನ್ನು ಅನಗತ್ಯವಾಗಿ ವಿಳಂಬ ಮಾಡಬಾರದು. ಕಾಮಗಾ-ರಿಗಳಿಗೆ ಸಂಬಂಧಿಸಿದ ತಾಂತ್ರಿಕ ಅಥ-'ವಾ ಆಡಳಿತಾತ್ಮಕ ಸಮಸ್ಯೆಗಳನ್ನು ಅಧಿಕಾ-ರಿಗಳು ಪರಸ್ಪರ ಸಮನ್ವಯದಿಂದ ಬಗೆಹರಿಸಿ, ನಿಗದಿತ ಕಾಲಮಿತಿಯಲ್ಲಿ ಯೋಜನೆಗಳನ್ನು ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಲಾಯಿತು.

ಅಭಿವೃದ್ಧಿ ಕಾಮಗಾರಿಗಳು ಕೇವಲ ಘೋಷಣೆಗಳಿಗೆ ಸೀಮಿತವಾಗದೆ, ನಿಗದಿತ ಅವಧಿಯಲ್ಲಿ ನೆಲಮಟ್ಟದಲ್ಲಿ ಪೂರ್ಣಗೊಂಡು ಜನರಿಗೆ ಅದರ ಪ್ರಯೋಜನ ದೊರೆಯಬೇಕು. ಈ ನಿಟ್ಟಿನಲ್ಲಿ ಕಾಮಗಾರಿಗಳ ಪ್ರಗತಿಯನ್ನು ನಿರಂತರವಾಗಿ ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಗುಣಮಟ್ಟದಲ್ಲಿ ಯಾವುದೇ ರಾಜಿ ಬೇಡ ಹೆದ್ದಾರಿ ಕಾಮಗಾರಿಗಳ ಗುಣಮಟ್ಟದಲ್ಲಿ ಯಾವುದೇ ರೀತಿಯ ರಾಜಿ ಮಾಡಿಕೊಳ್ಳಬಾರದು. ಕಾಮಗಾರಿಗೆ ಬಳಸುವ ಸಾಮಗ್ರಿಗಳ ಗುಣಮಟ್ಟ, ತಾಂತ್ರಿಕ ಮಾನದಂಡಗಳು ಹಾಗೂ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಮಗಾರಿ ಪೂರ್ಣಗೊಂಡ ನಂತರ ಸಾರ್ವಜನಿಕರಿಗೆ ದೀರ್ಘಕಾಲಿಕವಾಗಿ ಅನುಕೂಲವಾಗುವಂತೆ ರಸ್ತೆ ನಿರ್ಮಾಣವಾಗಬೇಕು ಎಂದು ಸೂಚಿಸಲಾಯಿತು.

ಹೆದ್ದಾರಿ ನಿರ್ಮಾಣದ ವೇಳೆ ಸಾರ್ವಜನಿಕರ ಸುರಕ್ಷತೆಗೆ ಹೆಚ್ಚಿನ ಆದ-'ತೆ ನೀಡಬೇಕು. ಕಾಮಗಾರಿ ನಡೆಯುವ ಸ್ಥಳಗಳಲ್ಲಿ ಅಗತ್ಯ ಸುರಕ್ಷತಾ ವ್ಯವಸ್ಥೆ, ಸೂಚನಾ ಫಲಕಗಳು ಹಾಗೂ ಸಂಚಾರ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಿಳಿಸಲಾಯಿತು.

ರಾಯಚೂರು ಲೋಕಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಉತ್ತಮ ರಸ್ತೆ ಮತ್ತು ಹೆದ್ದಾರಿ ಸಂಪರ್ಕ ವ್ಯವಸ್ಥೆ ಅತ್ಯಂತ ಅಗತ್ಯವಾಗಿದೆ. ಕೃಷಿ ಉತ್ಪನ್ನಗಳ ಸಾಗಾಟ, ವ್ಯಾಪಾರ?ವಹಿವಾಟು, ಕೈಗಾರಿಕಾ ಚಟುವಟಿಕೆ ಹಾಗೂ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗುವ ರೀತಿಯಲ್ಲಿ ಹೆದ್ದಾರಿ ಯೋಜನೆಗಳನ್ನು ವೇಗವಾಗಿ ಪೂರ್ಣಗೊಳಿಸುವ ಅಗತ್ಯವಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು. ಸಭೆಯಲ್ಲಿ ಎನ್‌ಎಚ್‌ಎಐ ಯೋಜನಾ ನಿರ್ದೇಶಕರು, ಮುಖ್ಯ ಇಂಜಿನಿಯರ್ ಸೇ-ರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು. ಕ್ಷೇತ್ರದ ವಿವಿಧ ಹೆದ್ದಾರಿ ಯೋಜನೆಗಳ ಪ್ರಗತಿ ಕುರಿತು ಅಧಿಕಾರಿಗಳು ಮಾಹಿತಿ ನೀಡಿದರು.

# ದೇಗುಲಗಳ ಜೀರ್ಣೋದ್ಧಾರಕ್ಕೆ ಧರ್ಮಸ್ಥಳ ಯೋಜನೆ ನೆರವು

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: ಸಮೀಪದ ದರೋಜಿ ವಲಯದ ದರೋಜಿ ಕಾರ್ಯಕ್ಷೇತ್ರದ ಬರುವ ದೇವಸ್ಥಾನ ಜೀರ್ಣೋದ್ಧಾರ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮದ ಶ್ರೀ ಈಶ್ವರ ದೇವಸ್ಥಾನಕ್ಕೆ 1,50,000ಗಳ ಡಿಡಿ ವಿತರಣೆ ಮಾಡಲಾಯಿತು.**

ಡಿಡಿ ಹಸ್ತಾಂತರಿಸಿ ಮಾತನಾಡಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ರೋಹಿತಾಕ್ಷರ ಮಾತನಾಡಿ ಸಾರ್ವಜನಿಕರಿಗೆ ಶುದ್ಧ ನೀರಿನ ಶುದ್ಧ ಘಟಕ ಸ್ಥಾಪನೆ, ಹಿಂದು ರುದ್ರ ಭೂಮಿಗಳ ನವೀಕರಣ, ಸಮುದಾಯಗಳ ಅಭಿವೃದ್ಧಿ, ಶಿಕ್ಷಕರ ಕೊರತೆ ಇದ್ದಲ್ಲಿ ಜ್ಞಾನದೀಪ ಶಿಕ್ಷಕರ ಒದಗಿಸುವದು,



ಸುಜ್ಞಾನ ನಿಧಿ, ಶಿಷ್ಯ ವೇತನ, ಕಾರ್ಯಕ್ರಮ ದುಶ್ಚಟ ಮುಕ್ತ ಸಮಾಜ ನಿರ್ಮಾಣಕ್ಕಾಗಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ, ಸ್ವಾಸ್ಥ ಸಂಕಲ್ಪ ಕಾರ್ಯಕ್ರಮಗಳು ಸೇರಿದಂತೆ ಇನ್ನು ಹಲವಾರು ಕಾರ್ಯಕ್ರಮಗಳು ನಮ್ಮ ಸಂಸ್ಥೆಯಿಂದ ನೀಡಿದ್ದು ಇದರ ಸದುಪಯೋಗ ಸರ್ವರು ಪಡೆಯಬೇಕೆಂದು ತಿಳಿಸಿದರು.

ಅದೇ ರೀತಿ ಕಂಪ್ಲಿ ತಾಲೂಕಿನ ಎಮ್ಮಿಗನೂರು ವಲಯದ ಹೊಸ ನೇಲುಡಿ ಕಾರ್ಯಕ್ಷೇತ್ರದಲ್ಲಿ ಶ್ರೀ ರೇವಣಸಿದ್ದೇಶ್ವರ ದೇವಸ್ಥಾನಕ್ಕೆ ಶ್ರೀ ಕ್ಷೇತ್ರದಿಂದ ಬಂದ 2 ಲಕ್ಷ ರೂಪಾಯಿ ಡಿಡಿಯನ್ನು ವಿತರಣೆ ಮಾಡಲಾಯಿತು. ತಾಲೂಕು ಯೋಜನಾಧಿಕಾರಿ ರಾಘವೇಂದ್ರ ಎಲ್ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ಧಾರ್ಮಿಕ ಕ್ಷೇತ್ರಗಳನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಪೂಜ್ಯರು ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಾರೆ.ಮುಂದಿನ ಯುವ ಪೀಳಿಗೆಯು ಇಂತಹ ಕಾರ್ಯಕ್ರಮಗಳಿಂದ ಧಾರ್ಮಿಕ ಪರಂಪರೆಯನ್ನುಉಳಿಸಿ ಬೆಳೆಸುವವರಾಗಿರಬೇಕು. ದೇವಸ್ಥಾನದ ಜೀರ್ಣೋದ್ಧಾರ ಕಾರ್ಯವು ಶೀಘ್ರವಾಗಿ ಪೂರ್ಣಗೊಳ್ಳಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಊರಿನ ಮುಖಂಡರಾದ ಗುರುಮೂರ್ತಿ, ವಲಯದ ಮಿಲಿಚರಕ ಮಂಜಣ್ಣ ಪಂಚಾಯಿತಿ ಸದಸ್ಯರಾದ ರಾಯಣ್ಣ ಊರಿನ ಮುಖಂಡರಾದ ರವಿ ಹೊನ್ನೂರು ಸ್ವಾಮಿ ರೇಣುಕಪ್ಪ ಕುಮಾರಸ್ವಾಮಿ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಸೇವಾ ಟ್ರಸ್ಟ್ ಪದಾಧಿಕಾರಿಗಳು ಸೇವಾ ಪ್ರತಿನಿಧಿರಿದ್ದರು. ಅದೇ ರೀತಿ ನೇಲುಡಿ ಗ್ರಾಮದ ಕಾರ್ಯಕ್ರಮದಲ್ಲಿ ದೇವಸ್ಥಾನದ ಕಮಿಟಿ ಸದಸ್ಯರುಗಳಾದಂತ ಕ-ರಿಬಸಯ್ಯ, ಕೊಟ್ರಯ್ಯ ಸ್ವಾಮಿ, ನಾಗರಾಜ್ ಇಟಗಿ, ಸಿದ್ದಪ್ಪ, ನಾಗರಾಜ್, ಶಂಭುಲಿಂಗ, ರಾಮಾಂಜನೇಯ, ಹೊಸಕೇರಪ್ಪ, ಹಾಗೂ ಊರಿನ ಮುಖಂಡರು ಉಪಸ್ಥಿತರಿದ್ದರು.

# ಬರ ಪರಿಸ್ಥಿತಿ, ಬೆಳೆ ಹಾನಿ ಪರಿಶೀಲಿಸಿದ ಸಚಿವ ಅಜಯ್ ಧರ್ಮಸಿಂಗ್

## ರೈತರ ಸಂಕಷ್ಟ ಆಲಿಸಿ, ಪರಿಹಾರ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿ, ಬೆಳೆ ಹಾನಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ರೈತರ ಸಂಕಷ್ಟಗಳ ವಾಸ್ತವ ಸ್ಥಿತಿಯನ್ನು ಅರಿಯುವ ಉದ್ದೇಶದಿಂದ ಸಂಪುಟ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಆ.7 ಮತ್ತು 8ರಂದು ಜಿಲ್ಲೆಯ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಜಿಲ್ಲೆಯ ಪ್ರವಾಸ ಕೈಗೊಂಡ ಸಚಿವರು, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಯಾಕ್ಲಾಸಪೂರ ಸೀಮಾಂತರದ ಸರ್ವೇ ನಂ.179 ಮತ್ತು 180 ಹಾಗೂ ಸಾತ್ ಮೈಲಿ-ಬಿಳಿಯಹುಣಸಿಹಾಳಹುಡ್ ಸೀಮಾಂತರದ ಸರ್ವೇ ನಂ.30(1)ರ ಜಮೀನುಗಳಿಗೆ ಭೇಟಿ ನೀಡಿದರು. ಈ ವೇಳೆ ಹತ್ತಿ, ತೊಗರಿ ಸೇರಿದಂತೆ ವಿವಿಧ ಬೆಳೆಗಳ ಸ್ಥಿತಿಗತಿಗಳನ್ನು ಖುದ್ದಾಗಿ ವೀಕ್ಷಿಸಿದರು. ಮಳೆ ಪ್ರಮಾಣ ಕಡಿಮೆಯಾಗಿರುವುದು ಹಾಗೂ ನೀರಿನ ಕೊರತೆಯಿಂದ ಬೆಳೆಗಳ ಬೆಳವಣಿಗೆ ಕುಂಠಿತಗೊಂಡಿರುವುದನ್ನು ಪರಿಶೀಲಿಸಿದ ಸಚಿವರು, ರೈತರೊಂದಿಗೆ ನೇರವಾಗಿ ಸಂವಾದ ನಡೆಸಿ ಬೆಳೆ ಹಾನಿ, ಸಾಲದ ಹೊರೆ, ನೀರಿನ ಸಮಸ್ಯೆ ಹಾಗೂ ಪರಿಹಾರದ ಅಗತ್ಯತೆ ಕುರಿತು ಮಾಹಿತಿ ಪಡೆದರು.

ರೈತರು ಎದುರಿಸುತ್ತಿರುವ ಸಂಕಷ್ಟಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುತ್ತಿದ್ದು, ವಾಸ್ತವ ಸ್ಥಿತಿಯ ಆಧಾರದ ಮೇಲೆ ಸೂಕ್ತ ಪರಿಹಾರ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಜಿಲ್ಲೆಯಲ್ಲಿ ಪ್ರಸಕ್ತ ಹಂಗಾಮಿನಲ್ಲಿ ಸುಮಾರು 2.27 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಹತ್ತಿ, ಸೂರ್ಯಕಾಂತಿ ಹಾಗೂ ತೊಗರಿ ಸೇ-ರಿದಂತೆ ಸುಮಾರು ಶೇ.90ರಷ್ಟು ಬೆಳೆ ಹಾನಿಯಾಗಿರುವುದಾಗಿ ಪ್ರಾಥಮಿಕ ಅಂ-ದಾಜು ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ರೈತರಿಗೆ ಸರ್ಕಾರದಿಂದ ದೊರೆಯಬೇಕಾದ ಪರಿಹಾರ ಹಾಗೂ ನೆರವು ಕ್ರಮಗಳ ಕುರಿತು ಸಚಿವರು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಂತರ ರಾಯಚೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಜಿಲ್ಲಾಧಿಕಾರಿ ಸೇರಿದಂತೆ ಕೃಷಿ, ಕಂದಾಯ,



ಗ್ರಾಮೀಣಾಭಿವೃದ್ಧಿ, ಜಲಸಂಪನ್ಮೂಲ, ಕುಡಿಯುವ ನೀರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾ-ರಿಗಳೊಂದಿಗೆ ಸಚಿವರು ಸಭೆ ನಡೆಸಿದರು. ಸಭೆಯಲ್ಲಿ ಜಿಲ್ಲೆಯ ಬರ ಪರಿಸ್ಥಿತಿ, ಬೆಳೆ ಹಾನಿಯ ಪ್ರಮಾಣ, ಅಂತರ್ಜಲ ಮಟ್ಟ, ಕುಡಿಯುವ ನೀರಿನ ಲಭ್ಯತೆ, ಜಲಮೂಲಗಳ ಸ್ಥಿತಿ ಹಾಗೂ ರೈತರ ಸಮಸ್ಯೆಗಳ ಕುರಿತು ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದರು. ಬರ ಪರಿಸ್ಥಿತಿಯನ್ನು ಪರಿಣಾಮಕಾ-ರಿಯಾಗಿ ಎದುರಿಸಲು ಅಗತ್ಯವಿರುವ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು.

ರೈತರ ಸಮಸ್ಯೆಗಳಿಗೆ ಅಧಿಕಾ-ರಿಗಳು ಸ್ಪಂದಿಸುವ ಮೂಲಕ ಸರ್ಕಾರದ ನೆರವು ಅರ್ಹ ಫಲಾನುಭವಿಗಳಿಗೆ ತಲುಪಿಸುವಂತೆ ಸಚಿವರು ಸೂಚಿಸಿದರು. ಬೆಳೆ ವಿಮೆ ಪರಿಹಾರ ವಿಳಂಬಕ್ಕೂ ಗಮನ ಇದೇ ಸಂದರ್ಭದಲ್ಲಿ ರೈತರಿಗೆ ಬೆಳೆ ವಿಮೆ ಪರಿಹಾರ (Insurance Claim) ದೊರೆಯುವಲ್ಲಿ ಉಂಟಾಗುತ್ತಿರುವ ವಿಳಂಬದ ಕುರಿತು ಸಚಿವರು ಮಾಹಿತಿ ಪಡೆದರು. ಬೆಳೆ ಹಾನಿಗೊಳಗಾದ ರೈತ-ರಿಗೆ ವಿಮಾ ಪರಿಹಾರ ತ್ವರಿತವಾಗಿ ದೊರೆಯುವಂತೆ ವಿಮಾ ಕಂಪನಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸ್ಥಳ ಪರಿಶೀಲನೆಯ ಸಂದರ್ಭದಲ್ಲಿ ರೈತರು ತಮ್ಮ ಬೆಳೆ ಹಾನಿಯ ವಾಸ್ತವ ಸ್ಥಿತಿಯನ್ನು ಸಚಿವರ ಗಮನಕ್ಕೆ ತಂದರು. ಮಳೆ ಕೊರತೆಯಿಂದ ಬೆಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಸಾಲ ತೀರಿಸುವುದು ಕಷ್ಟವಾಗಿದ್ದು, ಸರ್ಕಾರದಿಂದ ಶೀಘ್ರ ಪರಿಹಾರ ಹಾಗೂ ಅಗತ್ಯ ನೆರವು ನೀಡುವಂತೆ ಮನವಿ ಮಾಡಿದರು. ರೈತರ ಅಹವಾಲುಗಳನ್ನು ಆಲಿಸಿದ ಸಚಿವರು, ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಲಿದೆ.

ಅಧಿಕಾರಿಗಳಿಂದ ಪಡೆಯಲಾಗುವ ಸಮಗ್ರ ವರದಿ ಹಾಗೂ ಸ್ಥಳ ಪರಿಶೀಲನೆಯ ಆದ-ಾರದ ಮೇಲೆ ಸರ್ಕಾರದ ಮಟ್ಟದಲ್ಲಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸಚಿವರ ಈ ಪ್ರವಾಸವು ಕೇವಲ ಅಧಿಕಾರಿಗಳ ವರದಿಗೆ ಸೀಮಿತವಾಗದೆ, ರೈತರ ಜಮೀನುಗಳಿಗೆ ತೆರಳಿ ವಾಸ್ತವ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸುವ ಮೂಲಕ ಬರ ನಿರ್ವಹಣೆ ಹಾಗೂ ರೈತರಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಮಹತ್ವ ಪಡೆದಿದೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬ್ಯೂಟಿ & ವೆಲ್ನೆಸ್

ಬ್ಯೂಟಿ & ವೆಲ್ನೆಸ್ ಕ್ಷೇತ್ರವು ಸೌಂದರ್ಯ ಆರೈಕೆ, ವೈಯಕ್ತಿಕ ಗ್ರೂಮಿಂಗ್ ಮತ್ತು ಆರೋಗ್ಯಕರ ಜೀವನಶೈಲಿಗೆ ಸಂಬಂಧಿಸಿದ ವಿವಿಧ ಕೌಶಲ್ಯಗಳನ್ನು ಕಲಿಸುತ್ತದೆ. ಕಡಿಮೆ ಅವಧಿಯ ಕೋರ್ಸ್‌ಗಳ ಮೂಲಕವೂ ಈ ಕ್ಷೇತ್ರದಲ್ಲಿ ವೃತ್ತಿ ಆರಂಭಿಸಬಹುದು.

ಕಲಿಯಬಹುದಾದ ಪ್ರಮುಖ ಕೌಶಲ್ಯಗಳು

ಫೇಶಿಯಲ್, ಕ್ಲೀನ್-ಅಪ್ ಮತ್ತು ಸ್ಕಿನ್ ಕೇರ್

ಹೇರ್ ಕಟಿಂಗ್, ಹೇರ್ ಸ್ಟೈಲಿಂಗ್ ಮತ್ತು ಹೇರ್ ಕಲರಿಂಗ್

ಬ್ರೈಡಲ್, ಪಾರ್ಟಿ ಮತ್ತು ಬೇಸಿಕ್ ಮೇಕಪ್

ಮೆನಿಕ್ಯೂರ್ ಮತ್ತು ಪೆಡಿಕ್ಯೂರ್

ಸ್ಪಾ ಮತ್ತು ವೈಯಕ್ತಿಕ ಆರೈಕೆ

ಯೋಗ, ವೆಲ್ನೆಸ್ ಮತ್ತು ಮೂಲಭೂತ ಫಿಟ್‌ನೆಸ್

ಸೌಂದರ್ಯ ಉತ್ಪನ್ನಗಳ ಸರಿಯಾದ ಬಳಕೆ ಮತ್ತು ಗ್ರಾಹಕರ ಆರೈಕೆ ಸಲೂನ್ ನಿರ್ವಹಣೆ ಮತ್ತು ಗ್ರಾಹಕ ಸೇವೆ

ಕೋರ್ಸ್ ಆಯ್ಕೆ ಹೇಗೆ?

ಕಡಿಮೆ ಅವಧಿಯಲ್ಲಿ ಉದ್ಯೋಗಕ್ಕೆ: 1–3 ತಿಂಗಳ ಪ್ರಮಾಣಪತ್ರ ಕೋರ್ಸ್

ಹೆಚ್ಚಿನ ಪ್ರಾಯೋಗಿಕ ತರಬೇತಿಗೆ: 6–12 ತಿಂಗಳ ಡಿಪ್ಲೊಮಾ

ವಿಸ್ತೃತ ಶೈಕ್ಷಣಿಕ ಅಧ್ಯಯನಕ್ಕೆ: ಸಂಬಂಧಿತ ಪದವಿ ಕೋರ್ಸ್‌ಗಳು

ಉದ್ಯೋಗ ಕ್ಷೇತ್ರಗಳು

ಕೋರ್ಸ್ ಮುಗಿಸಿದ ನಂತರ ಕೆಳಗಿನ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಹುಡುಕಬಹುದು:

ಬ್ಯೂಟಿ ಥೆರಪಿಸ್ಟ್

ಹೇರ್ ಸ್ಟೈಲಿಸ್ಟ್

ಮೇಕಪ್ ಆರ್ಟಿಸ್ಟ್

ನೇಲ್ ಕೇರ್ ಟೆಕ್ನಿಷಿಯನ್

ಸ್ಪಾ/ವೆಲ್ನೆಸ್ ಸಹಾಯಕ

ಸಲೂನ್ ಮ್ಯಾನೇಜ್‌ಮೆಂಟ್

ಬ್ಯೂಟಿ ಟ್ರೈನರ್

ಸ್ವಂತ ಉದ್ಯಮದ ಅವಕಾಶ

ಅನುಭವ ಮತ್ತು ಅಗತ್ಯ ಕೌಶಲ್ಯ ಪಡೆದ ನಂತರ ಬ್ಯೂಟಿ ಪಾರ್ಲರ್, ಯುನಿಸೆಕ್ಸ್ ಸಲೂನ್, ಮೇಕಪ್ ಸ್ಟುಡಿಯೋ ಅಥವಾ ಸಣ್ಣ ವೆಲ್ನೆಸ್ ಸೇವಾ ಕೇಂದ್ರ ಆರಂಭಿಸುವ ಅವಕಾಶವೂ ಇದೆ. ಉದ್ಯಮ ಆರಂಭಿಸುವ ಮೊದಲು ಸ್ಥಳೀಯ ಪರವಾನಗಿ, ನೋಂದಣಿ ಮತ್ತು ಇತರ ನಿಯಮಗಳನ್ನು ಪರಿಶೀಲಿಸುವುದು ಮುಖ್ಯ.


ಸರ್ಕಾರಿ ತರಬೇತಿ

ಉಚಿತ ಅಥವಾ ಸಹಾಯಧನದ ಕೌಶಲ್ಯ ತರಬೇತಿಗಳಿಗಾಗಿ Skill India ಸಂಬಂಧಿತ ಅಧಿಕೃತ ಪೋರ್ಟಲ್‌ಗಳಲ್ಲಿ ಲಭ್ಯವಿರುವ ಕೋರ್ಸ್‌ಗಳು ಮತ್ತು ಅರ್ಹತೆಗಳನ್ನು ಪರಿಶೀಲಿಸಬಹುದು.

## ಆ.10ರಂದು ತುಂಗಭದ್ರಾ ನಾಲೆಗೆ ನೀರು ಬಿಡದ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಆಗಸ್ಟ್ 10ರಂದು ರೈತರ ಜೋಳದ ದುಡ್ಡು ತಕ್ಷಣವೇ ಹಾಕುವಂತೆ ಮತ್ತು ಬರಗಾಲ ತಾಲೂಕು ಎಂದು ಘೋಷಣೆ ಮಾಡುವುದು ಹಾಗೂ ಎಡದಂಡೆ ನಾಲೆಗೆ ನೀರು ಬೀಡವಂತೆ ಒತ್ತಾಯಿಸಿ ಭಾರತೀಯ ಜನತಾ ಪಕ್ಷದ ವತಿಯಿಂದ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಮುಖಂಡ ಕೆ ಕರಿಯಪ್ಪ ಹೇಳಿದರು.**



ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ತಾಲೂಕಿನಲ್ಲಿ ಈಗಾಗಲೇ ಬರಗಾಲದಿಂದ ಜನ ಜಾನುವಾರುಗಳು ತತ್ತರಿಸಿ ಹೋಗಿದ್ದು, ಜಲಾಶಯದಲ್ಲಿ ಒಂದು ಬೆಳೆಗೆ ಆಗುವಷ್ಟು ನೀರು ಸಂಗ್ರಹ ಇದ್ದರೂ ಕೂಡ ಕಾಲುವೆಗೆ ನೀರು ಬೀಡುತ್ತಿಲ್ಲ. ಸಕಾಲಕ್ಕೆ ಮಳೆ ಬರದ ಕಾರಣ ರೈತರು ಬೆಳೆ ಬೆಳೆಯಲು ಮತ್ತು ಜಾನುವಾರುಗಳಿಗೆ ನೀರು ಮತ್ತು ಮೇವಿನ ಸಮಸ್ಯೆ ಎದ್ದು ಕಾಣುತ್ತಿದೆ. ತುಂಗಭದ್ರಾ ಜಲಾಶಯದಲ್ಲಿ 68 ಟಿಎಂಸಿಗೂ ಅಧಿಕ ನೀರು ಸಂಗ್ರಹಣೆ ಇದ್ದರೂ ಕೂಡ ಸರ್ಕಾರ ಎಚ್ಚೆತ್ತುಕೊಳ್ಳತ್ತಿಲ್ಲ. ಸರ್ಕಾರದ ಗಮನ ಸೆಳೆಯಲು ತಹಶೀಲ್ ಕಚೇರಿ ಮುಂಭಾಗದಲ್ಲಿ ಹೋರಾಟ ಹಮ್ಮಿಕೊಂಡಿದ್ದು ಈ ಒಂದು ಪ್ರತಿಭಟನೆಯಲ್ಲಿ ನಗರ ಮತ್ತು ಗ್ರಾಮೀಣ ಮಂಡಲ ಅಧ್ಯಕ್ಷರು ಎಲ್ಲಾ ಪದಾಧಿಕಾರಿಗಳು, ರೈತರು ಹಾಗೂ ತಾಲೂಕಿನ ಹಿರಿಯ ಮುಖಂಡರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು ಎಂದು ತಿಳಿಸಿದರು.

## ಸರ್ಕಾರಿ ಉರ್ದು ಶಾಲಾ ಮಕ್ಕಳಿಗೆ ಇಡ್ಲಿ ವಿತರಣಾ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಟಿಪ್ಪು ನಗರದಲ್ಲಿರುವ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಇಡ್ಲಿ ವಿತರಣಾ ಕಾರ್ಯಕ್ರಮವನ್ನು ಶನಿವಾರ ಹಮ್ಮಿಕೊಳ್ಳಲಾಯಿತು.**



ಈ ವಿಶೇಷ ಕಾರ್ಯಕ್ರಮಕ್ಕೆ ಮುಸ್ಲಿಂ ಸಮಾಜದ ಯುವ ಮುಖಂಡ ಹಾಗೂ ಸಮಾಜ ಸೇವಕರಾದ ನಿರಂಜನಶಾ ಮಕಾನದಾರ ಅವರು ಚಾಲನೆ ನೀಡಿ ಮಾತನಾಡಿ ಈ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಇಡ್ಲಿ ವಿತರಣೆ ಕಾರ್ಯಕ್ರಮಕ್ಕೆ ನನ್ನನ್ನು ಆಹ್ವಾನಿಸಿ ಚಾಲನೆ ನೀಡಿಸಿದ್ದಕ್ಕೆ ತಮಗೆ ತುಂಬು ಹೃದಯದ ಧನ್ಯವಾದಗಳನ್ನು ತಿಳಿಸುತ್ತೇನೆ. ಇವತ್ತು ಸರ್ಕಾರಿ ಶಾಲೆಗಳಲ್ಲಿ ಅದರಲ್ಲಿಯೂ ಉರ್ದು ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದೆ ಇದನ್ನು ಹೆಚ್ಚಿಸಲು ಇಂಥ-'ಹ ಕಾರ್ಯಕ್ರಮಗಳ ಅಗತ್ಯವಿದೆ. ಶಾಲೆಯಲ್ಲಿ ಇಂತಹ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವ ಈ ಶಾಲೆಯ ಮುಖ್ಯ ಗುರುಗಳಾದ ಎಚ್ ಎಮ್ ಖಲೀಫಾ ಹಾಗೂ ಸಹ ಶಿಕ್ಷಕರಾದ ಎ ಎಂ ನಗಾರ್ಚಿ ಮತ್ತು ಎಲ್ಲಾ ಶಿಕ್ಷಕ ವೃಂದಕ್ಕೆ ಅಭಿನಂದಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಎಸ್ ಡಿ ಎಮ್ ಸಿ ಅಧ್ಯಕ್ಷರಾದ ಹುಸೇನಬಾಷಾ ಕಿತ್ತೂರ, ಸದಸ್ಯರಾದ ಮಂಜೂರು ಅಹಮದ್ ಬೇಪಾರಿ, ಬಸೀರ ಅಹಮದ್ ಹಂಡೇಬಾಗ,ಹುಸೇನಬಾಷಾ ಉಣ್ಣಿಬಾವಿ, ಪೀರ ಮೊಹಮ್ಮದ್ ಕುಳಗೇರಿ, ನಬಿರಸೂಲ್ ಶಾಪೂರಿ, ಚಾಂದಸಾಬ ಲಾಹೋರಿ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿ,ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಸಂಕಷ್ಟದಲ್ಲಿರುವ ಪ್ರತಿಯೊಬ್ಬ ರೈತನಿಗೆ ಸೂಕ್ತ ಪರಿಹಾರ: ಸಚಿವ ಡಾ.ಅಜಯ್ ಧರ್ಮಸಿಂಗ್

❑ ನೈಜ್ಯ ದೆಸೆ ನ್ಯೂಸ್



**ರಾಯಚೂರು ಆಗಸ್ಟ್ 08 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಬರ ಅಧ್ಯಯನ ಆರಂಭಿಸಿರುವ ಕರ್ನಾಟಕ ಸರ್ಕಾರದ ನೂತನ ಸಚಿವರಾದ ಡಾ.ಅಜಯ್ ಜುಚಿಡಿಚಿಟ್ಟುಟಿರು ಅವರು 2ನೇ ದಿನವೂ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಬರ ಪರಿಶೀಲನೆ ನಡೆಸುವಲ್ಲಿ ನಿರತರಾದರು.**

ಈ ವೇಳೆ ಕರ್ನಾಟಕ ಸರ್ಕಾರದ ನೂತನ ಸಚಿವರಾದ ಡಾ.ಅಜಯ್ ಧರಂಸಿಂಗ್ ಅವರು ಪೋತ್ನಾಳ ಗ್ರಾಮದ ಜಮೀನಿನ ಪರಿಶೀಲನೆ ನಂತರ ಮಾತನಾಡಿದ ಅವರು ರಾಯಚೂರು ಜಿಲ್ಲೆಯಲ್ಲಿ ಮಳೆಯ ಅಭಾವ ಹಾಗೂ ಕೃಷಿ ಬಿಕ್ಕಟ್ಟಿನಿಂದಾಗಿ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದು, ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ. ಈ ಹಿನ್ನೆಲೆಯಲ್ಲಿ ಮಸ್ಕಿ ಮತ್ತು ಸಿಂಧನೂರು ತಾಲೂಕುಗಳ ವಿವಿಧ ಪ್ರದೇಶಗಳಿಗೆ ಜನಪ್ರತಿನಿಧಿಗಳ ಹಾಗೂ ನಾಯಕರ ತಂಡ ಭೇಟಿ ನೀಡಿ, ನೇರವಾಗಿ ರೈತರನ್ನು ಭೇಟಿಯಾಗಿ ಅವರ ಕುಂದುಕೊರತೆಗಳನ್ನು ಆಲಿಸಲಾಗುತ್ತಿದೆ.

ಜಿಲ್ಲೆಯಲ್ಲಿ ಪ್ರಸಕ್ತ ಕೃಷಿ ಸ್ಥಿತಿ ಆತಂಕಕಾ-ರಿಯಾಗಿದೆ. ಪ್ರತಿ ವರ್ಷ ಕನಿಷ್ಠ 1 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗುತ್ತಿತ್ತು. ಆದರೆ ಈ ಬಾರಿ ಕೇವಲ 12,000 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಇದರಲ್ಲಿ ಸುಮಾರು 4,000 ಹೆಕ್ಟೇರ್ ಹತ್ತಿ ಹಾಗೂ 7,000 ಹೆಕ್ಟೇರ್ ಸೂರ್ಯಕಾಂತಿ ಬೆಳೆ ಸೇರಿದೆ ಎಂದರು. ವಾಡಿಕೆಯಂತೆ ನಡೆಯಬೇಕಿದ್ದ 1 ಲಕ್ಷ ಹೆಕ್ಟೇರ್ ಬಿತ್ತನೆಗೆ ಹೋಲಿಸಿದರೆ ಈ ಬಾರಿ ಬಿತ್ತನೆಯಾಗಿರುವುದು ಕೇವಲ 12,000 ಹೆಕ್ಟೇರ್ ಮಾತ್ರ. ಮಸ್ಕಿಯಿಂದ ಸಿಂಧನೂರುವರೆಗಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಬೆಳೆ ಹಾನಿ ಹಾಗೂ ರೈತರ ಸಂಕಷ್ಟದ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸಲಾಗುತ್ತಿದೆ. ನಮ್ಮ ಸರ್ಕಾರ ಸಂಪೂರ್ಣವಾಗಿ ರೈತರ ಪರವಾಗಿದ್ದು, ಸಂಕಷ್ಟದಲ್ಲಿರುವ ಪ್ರತಿಯೊಬ್ಬ ರೈತನಿಗೆ ಸೂಕ್ತ ಪರಿಹಾರ ಮತ್ತು ಅಗತ್ಯ ನೆರವು ಒದಗಿಸಲು ಎಲ್ಲಾ ಕ್ರಮ ಕೈಗೊಳ್ಳಲಾಗುವುದು.

ಅಲ್ಲದೆ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಸೂಕ್ತ ಪರಿಹಾರ ಧನ ಹಾಗೂ ಕೃಷಿ ಸೌಲಭ್ಯಗಳನ್ನು ತಲುಪಿಸಲು ಬದ್ಧರಾಗಿದ್ದೇವೆ ಎಂದು ಭರವಸೆ ನೀಡಿದರು.

ವಿವಿಧ ಸ್ಥಳಗಳ ವೀಕ್ಷಣೆ: ಬರ ಪರಿಸ್ಥಿತಿ, ಅತಿವೃಷ್ಟಿ ನಿರ್ವಹಣೆ ಕುರಿತ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರಂಸಿಂಗ್ ಅವರು ರಾಯಚೂರು ಜಿಲ್ಲೆಯಲ್ಲಿ ಎರಡನೇ ದಿನವೂ ಪ್ರವಾಸ ಮುಂದುವರೆದಿದ್ದು, ರಾಯಚೂರು ಜಿಲ್ಲೆಯ ಮಾನ್ವಿ, ಮಸ್ಕಿ ಹಾಗೂ ಸಿಂಧನೂರು ತಾಲೂಕಿನ ಬರ ನಷ್ಟಕ್ಕೆ ಒಳಗಾದ ವಿವಿಧ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಶನಿವಾರ ಬೆಳಿಗ್ಗೆ ಲಿಂಗಸುಗೂರು ತಾಲೂಕಿನ ಹಟ್ಟಿ ಚಿನ್ನದ ಗಣಿಯ ಸರ್ಕಿಟ್ ಹೌಸ್ ನಿಂದ ನೇರವಾಗಿ ಮಸ್ಕಿ ತಾಲ್ಲೂಕಿನ ಸಂತೆಕಲ್ಲೂರು ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ತೊಗರಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿ, ನಂತರ ಗುಡದೂರು ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಸೂರ್ಯಕಾಂತಿ, ತೊಗರಿ ಹಾಗೂ ಹತ್ತಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿದರು. ನಂತರ ಹಸಮಕಲ್ ಗ್ರಾಮದ ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಕೆರೆ ವೀಕ್ಷಣೆ ಮಾಡಿದರು. ಸಿಂಧನೂರು ತಾಲ್ಲೂಕಿನ ಜವಳಗೇರ ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಹತ್ತಿ ಬೆಳೆಯ ಕ್ಷೇತ್ರ ಹಾಗೂ ಬನ್ನಿಗನೂರು ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಸೂರ್ಯಕಾಂತಿ ಹಾಗೂ ಹತ್ತಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿದರು.

ನಂತರ ಮಾನ್ವಿ ತಾಲೂಕಿನ ಹಿರೇಕೊಟ್ಟೆಕಲ್ ಹೋಬಳಿಯ ಪೋತನಾಳ್ ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಹತ್ತಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿ, ನೇರವಾಗಿ ಮಾನ್ವಿ ಪ್ರವಾಸ ಮಂದಿರಕ್ಕೆ ಆಗಮಿಸಿ ಮುಖಂಡರು ಚರ್ಚಿಸಿದರು. ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್. ಎಸ್.ಭೋಸರಾಜು, ಮಾನ್ವಿ ಶಾಸಕ ಜಿ.ಹಂಪಯ್ಯ ನಾಯಕ, ಮಸ್ಕಿ ಶಾಸಕ ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣ್ಣೆಪ್ಪ ಕಲಶೆಟ್ಟಿ, ಸಿಂಧನೂರು ತಹಶಿಲ್ದಾರ್ ಅರುಣ್ ಕುಮಾರ್ ದೇಸಾಯಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ಉಪ ನಿರ್ದೇಶಕ ನಹೀಂ ಹುಸೇನ್ ಸೇರಿದಂತೆ ಇತರರು ಇದ್ದರು.

## ಹೋಬಳಿ, ಗ್ರಾಮಗಳಿಗೆ ತೆರಳಿ ನಿಖರ ಬೆಳೆ ಸಮೀಕ್ಷೆ ನಡೆಸಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಸಚಿವ ಡಾ. ಅಜಯ್ ಧರ್ಮಸಿಂಗ್



❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಉಂಟಾಗಿರುವ ಬರಗಾಲದ ತೀವ್ರತೆ ಹಾಗೂ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಮಗ್ರ ಅಧ್ಯಯನ ನಡೆಸುವ ಉದ್ದೇಶದಿಂದ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಅವರು ನಿನ್ನೆ ಹಾಗೂ ಇಂದು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಭೇಟಿ ನೀಡಿ ಬೆಳೆ ಪರಿಶೀಲನೆ ನಡೆಸಿದರು.**

ಸಕಾಲದಲ್ಲಿ ಸಮರ್ಪಕ ಮಳೆಯಾಗದ ಪರಿಣಾಮ ಜಿಲ್ಲೆಯ ವಿವಿಧ ಭಾಗಗಳಲ್ಲಿ ಹತ್ತಿ, ಸೂರ್ಯಕಾಂತಿ, ತೊಗರಿ, ಸಜ್ಜೆ ಸೇರಿದಂತೆ ಹಲವು ಖಾರೀಫ್ ಬೆಳೆಗಳು ಮಳೆ ಕೊರತೆಯಿಂದ ಸೊರಗಿವೆ. ಬೆಳೆಗಳ ಸ್ಥಿತಿ ಹಾಗೂ ಮಳೆ ಕೊರತೆಯಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಸಚಿವರು ಸ್ಥಳಕ್ಕೆ ತೆರಳಿ ಪರಿಶೀಲಿಸಿದರು.

ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಇಂದು ರಾಯಚೂರು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು, ಜಿಲ್ಲೆಯಲ್ಲಿನ ಬರ ಪರಿಸ್ಥಿತಿ, ಬೆಳೆಗಳ ಸ್ಥಿತಿ ಹಾಗೂ ಕುಡಿಯುವ ನೀರಿನ ಲಭ್ಯತೆ ಕು-ರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಮುಂದಿನ ದಿನಗಳಲ್ಲಿ ರೈತರು, ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಜಿಲ್ಲಾಡಳಿತ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಅದೇ ರೀತಿ, ಬೆಳೆ ಹಾನಿಯ ನೈಜ ಚಿತ್ರಣ ಸರ್ಕಾರಕ್ಕೆ ತಲುಪುವಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹೋಬಳಿ ಮತ್ತು ಗ್ರಾಮೀಣ ಪ್ರದೇಶಗಳಿಗೆ ಖುದ್ದಾಗಿ ತೆರಳಿ ಬೆಳೆ ಸಮೀಕ್ಷೆ ನಡೆಸಬೇಕು. ರೈತರ ಜಮೀನುಗಳಿಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿ, ಯಾವುದೇ ಲೋಪವಾಗದಂತೆ ಸಮರ್ಪಕ ಹಾಗೂ ನಿಖರವಾದ ವರದಿಯನ್ನು ಸಿದ್ಧಪಡಿಸಿ ಸಲ್ಲಿಸಬೇಕು ಎಂದು ಸಚಿವರು ಕಟ್ಟುನಿಟ್ಟಿನ ಆದೇಶ ನೀಡಿದರು.

ಬೆಳೆ ಸಮೀಕ್ಷೆ ಕೇವಲ ದಾಖಲೆಗಳಿಗೆ ಸೀಮಿತವಾಗದೆ, ರೈತರ ಜಮೀನುಗಳಿಗೆ ತೆರಳಿ ವಾಸ್ತವ ಪರಿಸ್ಥಿತಿಯನ್ನು ಆಧರಿಸಿ ನಡೆಸಬೇಕು. ಮಳೆ ಕೊರತೆಯಿಂದ ಹಾನಿಗೊಳಗಾದ ಬೆಳೆಗಳ ನಿಖರ ಮಾಹಿತಿ ಸರ್ಕಾರಕ್ಕೆ ತಲುಪುವಂತೆ ಅಧಿಕಾ-ರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸಚಿವರು ತಿಳಿಸಿದರು. ರೈತರು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸುವುದರ ಜೊತೆಗೆ, ಜಾನುವಾರುಗಳಿಗೂ ಅಗತ್ಯವಿರುವ ನೀರು ಮತ್ತು ಇತರೆ ಸೌಲಭ್ಯಗಳ ವ್ಯವಸ್ಥೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸಭೆಯಲ್ಲಿ ಸಂಸದರಾದ ಜಿ. ಕುಮಾರ್ ನಾಯಕ್, ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಭೋಸರಾಜು, ಶಾಸಕರಾದ ಬಸವನಗೌಡ ದದ್ದಲ್, ಬಸವನಗೌಡ ತುರುವಿಹಾಳ, ಜಿ. ಹಂಪಯ್ಯ ನಾಯಕ್, ಶಿವರಾಜ್ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ಶ್ರೀಮತಿ ಎಸ್. ಪೂವಿತ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಬರಪೀಡಿತ ತಾಲೂಕು ಘೋಷಣೆಗೆ ಆಗ್ರಹಿಸಿ ಆ.10 ರಂದು ಬೃಹತ್ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿ, ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸುವಂತೆ ಆಗ್ರಹಿಸಿ ಬಿಜೆಪಿ ರೈತ ಮೋರ್ಚಾದ ವತಿಯಿಂದ ಸೋಮವಾರ, ಆಗಸ್ಟ್ 10, 2026 ರಂದು ಬೆಳಗ್ಗೆ 11 ಗಂಟೆಗೆ ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿರುವ ಮೂರ್ತಿ ಪ್ರತಿಷ್ಠಾಪನಾ ಸ್ಥಳದ ಎದುರುಗಡೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.**

ಶನಿವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭಾರತೀಯ ಜನತಾ ಪಕ್ಷದ ರೈತ ಮೋರ್ಚಾ ರಾಜ್ಯಾಧ್ಯಕ್ಷರಾದ ಎ. ಎಸ್. ಪಾಟೀಲ ನಡಹಳ್ಳಿ ಅವರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಯಿತು. ಸಭೆಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ಅತ್ಯಂತ ಬರಪೀಡಿತ ಪ್ರದೇಶಗಳಲ್ಲಿ ತಾಳಿಕೋಟೆ, ಮುದ್ದೇಬಿಹಾಳ ಹಾಗೂ ದೇವರಹಿಪ್ಪರಗಿ ಭಾಗಗಳು ಪ್ರಮುಖವಾಗಿವೆ ಎಂದು ಹೇಳಿದರು.

ವಿಜಯಪುರ ಜಿಲ್ಲೆಯ ಈ ಭಾಗಗಳು ಉತ್ತರ ಕರ್ನಾಟಕದ ಒಣಹವಾಮಾನ ಪ್ರದೇಶದ ಭಾಗವಾಗಿದ್ದು, ಕೃಷಿ ಮಳೆಯ ಮೇಲೆ ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿತವಾಗಿದೆ. ಕರ್ನಾಟಕ ಸರ್ಕಾರದ ದಾಖಲೆಗಳಲ್ಲಿಯೂ ಮುದ್ದೇಬಿಹಾಳ ಸೇರಿದಂತೆ ವಿಜಯಪುರ



ಜಿಲ್ಲೆಯ ಹಲವು ತಾಲೂಕುಗಳು ಉತ್ತರ ಕರ್ನಾಟಕದ ಒಣ ವಲಯಕ್ಕೆ ಸೇರಿವೆ ಆದ್ದ-ರಿಂದ ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಬೇಕು. ಮಳೆ ಕೊರತೆ ಹಾಗೂ ಮಳೆಯಲ್ಲಿನ ಅನಿಶ್ಚಿತತೆಯಿಂದಾಗಿ ರೈತರು ಬೆಳೆ ಬೆಳೆಯಲು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಸಮಯಕ್ಕೆ ಸರಿಯಾಗಿ ಮಳೆಯಾಗದಿರುವುದು, ಬಿತ್ತನೆ ಮಾಡಿದ ನಂತರ ಮಳೆ ಕೈಕೊಡುವುದು ಹಾಗೂ ಮಳೆಯ ಹಂಚಿಕೆಯಲ್ಲಿ ವ್ಯತ್ಯಾಸ ಉಂಟಾಗುವುದರಿಂದ ಬಿತ್ತನೆ ಮಾಡಿದ ಬೆಳೆಗಳ ಬೆಳವಣಿಗೆ ಕುಂಠಿತವಾಗುವ ಮತ್ತು ಇಳುವರಿ ಕುಸಿಯುವ ಆತಂಕ ರೈತರಲ್ಲಿ ಮೂಡಿದೆ.

ಇದರ ಪರಿಣಾಮವಾಗಿ ರೈತರ ಆದಾಯದ ಮೇಲೆ ನೇರ ಪರಿಣಾಮ ಬೀರುವುದರ ಜೊತೆಗೆ, ಬೀಜ, ಗೊಬ್ಬರ, ಕೀಟನಾಶಕ, ಕೃಷಿ ಯಂತ್ರೋಪಕರಣ ಹಾಗೂ ಕೂಲಿ ವೆಚ್ಚಗಳಿಗೆ ಮಾಡಿರುವ ಹೂಡಿಕೆಯೂ ವಾಪಸ್ ಬರುವುದಿಲ್ಲ ಎಂಬ ಆತಂಕ ಎದುರಾಗಿದೆ. ಬರ ಪರಿಸ್ಥಿತಿ ಕೇವಲ ಕೃಷಿಗೆ ಮಾತ್ರ ಸೀಮಿತವಾಗದೆ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಮತ್ತು ನೀರು, ಗ್ರಾಮೀಣ ಉದ್ಯೋಗ ಹಾಗೂ ಗ್ರಾಮೀಣ ಆರ್ಥಿಕ ಚಟುವಟಿಕೆಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.


ಪ್ರಮುಖ ಬೇಡಿಕೆಗಳು: ಈ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ತಾಳಿಕೋಟೆ ಹಾಗೂ ಮುದ್ದೇಬಿಹಾಳ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಬೇಕು. ದೇವರಹಿಪ್ಪರಗಿ ಕ್ಷೇತ್ರದ ಬರ ಪರಿಸ್ಥಿತಿಯನ್ನೂ ಸಮಗ್ರವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಬರದಿಂದ ಹಾನಿಗೊಳಗಾದ ಬೆಳೆಗಳ ವೈಜ್ಞಾನಿಕ ಸಮೀಕ್ಷೆ ನಡೆಸಿ ರೈತರಿಗೆ ಬೆಳೆ ಪರಿಹಾರ ನೀಡಬೇಕು. ರೈತರಿಗೆ ಲಭ್ಯವಿರುವ ಸರ್ಕಾರದ ಬರ ಪರಿಹಾರ ಹಾಗೂ ಇತರ ನೆರವುಗಳನ್ನು ತ್ವರಿತವಾಗಿ ಒದಗಿಸಬೇಕು. ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಗ್ರಾಮಗಳಿಗೆ ಮುನ್ನೆಚ್ಚರಿಕೆಯಾಗಿ ಟ್ಯಾಂಕರ್ ಹಾಗೂ ಪರ್ಯಾಯ ನೀರಿನ ವ್ಯವಸ್ಥೆ ಕಲ್ಪಿಸಬೇಕು. ರೈತರ ಸಾಲದ ಒತ್ತಡವನ್ನು ಪರಿಗಣಿಸಿ ಅಗತ್ಯ ರಿಯಾಯಿತಿ ಮತ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು. ನರೇಗಾ ಸೇರಿದಂತೆ ಗ್ರಾಮೀಣ ಉದ್ಯೋಗಾವಕಾಶಗಳನ್ನು ಹೆಚ್ಚಿಸಿ, ಬರದಿಂದ ಸಂಕಷ್ಟಕ್ಕೊಳಗಾದ ಕುಟುಂಬಗಳಿಗೆ ಉದ್ಯೋಗದ ಭದ್ರತೆ ಒದಗಿಸಬೇಕು ಈ ಉದ್ದೇಶಕ್ಕಾಗಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ರೈತರು, ಕೃಷಿಕರು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸುವಂತೆ ಸಭೆಯಲ್ಲಿ ಕರೆ ನೀಡಲಾಯಿತು. ಸಭೆಯಲ್ಲಿ ದೇವರ ಹಿಪ್ಪರಗಿ ಕ್ಷೇತ್ರದ ಮಾಜಿ ಶಾಸಕ ಸೋಮನಗೌಡ ಪಾಟೀಲ ಸಾಸನೂರ, ಬಸನಗೌಡ ಪಾಟೀಲ ಯಡಿಯಾಪುರ, ಜಿಪಂ ಮಾಜಿ ಸದಸ್ಯ ಬಸನಗೌಡ ವಣಕಿಹಾಳ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# "ಸಿಪಿಐಎಂಎಲ್ ರೇಡ್ ಸ್ಟಾರ್ ಪಕ್ಷದಿಂದ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ"

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಪೋತ್ನಾಳ ಗ್ರಾಮದಲ್ಲಿ ನಡೆಯುತ್ತಿರುವ ರಾಜ್ಯ ಹೆದ್ದಾರಿ ಕಾಮಗಾರಿಯಲ್ಲಿನ ಲೋಪದೋಷಗಳನ್ನು ಸರಿಪಡಿಸಲು ಹಾಗೂ ಸಾರ್ವಜನಿಕರಿಗೆ ಮೂಲ ಸೌಕರ್ಯಗಳನ್ನು ಕಲ್ಪಿಸುವ ಕುರಿತು ಶುಕ್ರವಾರ ಬೃಹತ್ ಪ್ರತಿಭಟನೆ ಮಾಡಿದ್ದ ಸಂಘಟನೆ ಇಂದು ಡಿ.ಕೆ ಶಿವಕುಮಾರ್ ನೇತೃತ್ವದ ಸರ್ಕಾರದಲ್ಲಿ ಮೊದಲ ಬಾರಿ ಸಚಿವರಾಗಿ ಪ್ರಸ್ತುತ ಆವರಿಸುತ್ತಿರುವ ಬರ ವೀಕ್ಷಿಸಣೆಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾಗಿ ಮಾನ್ವಿ ತಾಲೂಕಿಗೆ ಆಗಮಿಸಿದ ಅಜಯ್ ಧರ್ಮಸಿಂಗ್ ಅವ-ರಿಗೆ ತಾಲೂಕು ಸಿಪಿಐಎಂಎಲ್ ರೇಡ್ ಸ್ಟಾರ್ ಪಕ್ಷದಿಂದ ಮನವಿ ಪತ್ರ ಸಲ್ಲಿಸಲಾಯಿತು.**

ಪೋತ್ನಾಳ ಗ್ರಾಮದಲ್ಲಿ ಬರ ಪೀಡಿತ ಪ್ರದೇಶ ವೀಕ್ಷಣೆಗೆ ಆಗಮಿಸಿದ ಸಚಿವರಿಗೆ ಮನವಿ ಸಲ್ಲಿಸಿ ಮಾತನಾಡಿದ ತಾಲೂಕು ಕಾರ್ಯದರ್ಶಿ



ಯಲ್ಲಪ್ಪ ಉಟಕನೂರು ಗ್ರಾಮದಲ್ಲಿ ಕೆಆರ್ಡಿಸಿ-ಎಲ್ ರಾಜ್ಯ ಹೆದ್ದಾರಿ ಕಾಮಗಾರಿ ನಡೆಯುತ್ತಿದ್ದು ಕಾಮಗಾರಿಯಲ್ಲಿ ಹಲವಾರು ಲೋಪ ದೋಷಗಳು ಕಂಡು ಬರುತ್ತಿವೆ. ರಸ್ತೆ ಅಗಲೀಕರಣ, ಚರಂಡಿ ವ್ಯವಸ್ಥೆ, ಸಾರ್ವಜನಿಕ ಸುರಕ್ಷತೆ, ಆಟೋ ಚಾಲಕ-ರಿಗೆ ಆಟೋ ನಿಲ್ದಾಣ, ಬಸ್ ಪ್ರಯಾಣಿಕ-ರಿಗೆ ಸೇಲ್ಟರ್ ಸೌಲಭ್ಯ ಸೇರಿದಂತೆ ಅನೇಕ ವಿಷಯಗಳಲ್ಲಿ ಸಾರ್ವಜನಿಕರ ಅಭಿಪ್ರಾಯವನ್ನು ಪರಿಗಣಿಸದೆ ಕಾಮಗಾರಿ ನಡೆಸಲಾಗುತ್ತಿದೆ.

ಇದರಿಂದ ಗ್ರಾಮಸ್ಥರು, ರೈತರು, ವ್ಯಾಪಾರಸ್ಥರು, ವಿದ್ಯಾರ್ಥಿಗಳು, ವಾಹನ ಸವಾರರು ಹಾಗೂ ಪಾದಚಾರಿಗಳು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ರಸ್ತೆ ಬದಿಯಲ್ಲಿ ಕುಳಿತು ಜೀವನೋಪಾಯ ನಡೆಸುತ್ತಿರುವ ಬೀದಿ ಬದಿಯ ವ್ಯಾಪಾರಿಗಳಿಗೆ ಯಾವುದೇ ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಇರುವುದರಿಂದ ಕುಟುಂಬಗಳ ಜೀವನೋಪಾಯಕ್ಕೆ ತೀವ್ರ ಸಂಕಷ್ಟ ಉಂಟಾಗಿದೆ. ಅವರಿಗೆ ಸೂಕ್ತ ಹಾಗೂ ಶಾಶ್ವತ ವ್ಯಾಪಾರ ಸ್ಥಳ ಕಲ್ಪಿಸಿ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಅನುಕೂಲಕ್ಕಾಗಿ ಸುಸಜ್ಜಿತ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು. ಪ್ರಯಾಣಿಕರ ಅನುಕೂಲಕ್ಕಾಗಿ ಅಗತ್ಯ ಸೌಲಭ್ಯಗಳೊಂದಿಗೆ ನೂತನ ಬಸ್ ನಿಲ್ದಾಣ ಬಸ್ ಶೆಲ್ಟರ್ ನಿರ್ಮಿಸಬೇಕು.

ವಿದ್ಯುತ್ ಕಂಬಗಳು, ವ್ಯವಸ್ಥಿತ ಕುಡಿಯುವ ನೀರಿನ ಪೈಪ್ ಲೈನ್ ಸೇ-ರಿದಂತೆ ಸಾರ್ವಜನಿಕರ ಮೂಲ ಸೌಕರ್ಯಗಳಿಗೆ ಹಾನಿಯಾಗದಂತೆ ಕಾಮಗಾರಿ ಕೈಗೊಳ್ಳಬೇಕು. ಕಾಮಗಾರಿ ಪೂರ್ಣಗೊಳ್ಳುವವರೆಗೆ ಸಾರ್ವಜನಿಕರ ಸುರಕ್ಷತೆಗಾಗಿ ಬ್ಯಾರಿಕೇಡ್, ಎಚ್ಚರಿಕೆ ನಾಮ ಫಲಕಗಳು, ರಾತ್ರಿ ವೇಳೆ ಕಾಮಗಾರಿ ಸ್ಥಳದಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಜನಪ್ರತಿನಿಧಿಗಳು, ಸಾರ್ವಜನಿಕರು ಹಾಗೂ ಸಂಬಂಧಿತ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಭೆ ನಡೆಸಿ ಸಾರ್ವಜನಿಕರ ಅಭಿಪ್ರಾಯವನ್ನು ಪಡೆದು ಮುಂದಿನ ಕಾಮಗಾರಿ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಿಪಿಐಎಂಎಲ್ ರೇಡ್ ಸ್ಟಾರ್ ತಾಲೂಕು ಕಾರ್ಯದರ್ಶಿ ಯಲ್ಲಪ್ಪ ಉಟಕನೂರು, ಹುಚ್ಚಪ್ಪ ಉರಲಗಡ್ಡಿ, ಮಂಜು ಆಟೋ

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINT-ERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101